# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 54 | MONDAY 04-05-2026 | PRGI No : KNKAN/26/A0962 | Pages:4 | Rs.2.00 | M: 9742418836

## ಸಿಎಂ ಕುರ್ಚಿ ಕಚ್ಚಾಟ: ಒಳಜಗಳದ 3ನೇ ಬಾಗಿಲು ಖರ್ಗೆ ಓಪನ್ ಮಾಡಿದ್ದಾರೆ; ಆರ್.ಅಶೋಕ್ ವ್ಯಂಗ್ಯ

ಬೆಂಗಳೂರು: ಕಾಂಗ್ರೆಸ್ ಸರ್ಕಾರದ ಒಳಜಗಳದ ವಿಚಾರ ಮತ್ತೆ ಚರ್ಚೆಗೆ ಕಾರಣವಾಗಿದ್ದು, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ತೀವ್ರವಾಗಿ ಟೀಕಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಕುರ್ಚಿಗಾಗಿ ನಡೆಯುತ್ತಿರುವ ಕಲಹದಿಂದ ಹೆಚ್ಚು ಗೊಂದಲ ಉಂಟಾಗಿದೆ. ಇಬ್ಬರ ಜಗಳ ಮೂರನೆಯವನಿಗೆ ಲಾಭ ಎಂಬಂತೆ ಮಲ್ಲಿಕಾರ್ಜುನ ಖರ್ಗೆ ( ಕೂಡ ಸಿಎಂ ಆಗಲು ಪ್ರಯತ್ನ ಮಾಡಿದ್ದಾರೆಂದು ವ್ಯಂಗ್ಯವಾಡಿದ್ದಾರೆ.

ರಾಜ್ಯದಲ್ಲಿ ಸಿಎಂ ಕುರ್ಚಿ ಕಲಹ ರಾಜ್ಯದ ಆಡಳಿತವನ್ನು ಕುಗ್ಗಿಸುತ್ತಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೊಸ ಹೇಳಿಕೆ ನೀಡಿ ಇನ್ನಷ್ಟು ಗೊಂದಲ ಉಂಟುಮಾಡಿದ್ದಾರೆ. ಮುಂದೆ ನನ್ನ ಪರ್ವ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳುತ್ತಿದ್ದು, ಆ ಪರ್ವಕ್ಕೆ ಕಲ್ಲು ಬಿದ್ದಿದೆ.

ಈಗ ಮಲ್ಲಿಕಾರ್ಜುನ ಖರ್ಗೆ ಮಧ್ಯ ಪ್ರವೇಶ ಮಾಡಿ ನನಗೂ ಆಸೆಯಿದೆ, ಹಿಂದೆ ನನಗೆ ಮೋಸವಾಗಿದೆ ಎಂದು ಹೇಳಿದ್ದಾರೆ. ಬಹುಶಃ ಕಾಂಗ್ರೆಸ್ ಹೈಕಮಾಂಡ್‌ನಿಂದ ಅವರು ಸಿಎಂ ಆಗಲು ಗ್ರೀನ್ ಸಿಗ್ನಲ್ ಸಿಕ್ಕಿರಬಹುದು. ಖರ್ಗೆ ಸಿಎಂ



ಆಗಬೇಕೆಂದು ಈಗಾಗಲೇ ಎಲ್ಲರೂ ಹೇಳಿದ್ದಾರೆ. ನಾನು ಸಿಎಂ ಆಗಲು ಸಿದ್ಧನಿದ್ದೇನೆ ಎಂದು ಖರ್ಗೆ ಹೇಳಿದ್ದಾರೆ. ಇದೂವರೆಗೆ ಅವರು ಬಹಳ ಪ್ರಯತ್ನ ಮಾಡಿದ್ದರೂ ಸಿಎಂ ಆಗಿರಲಿಲ್ಲ. ಈ ಸಮಯದಲ್ಲಾದರೂ ಸಿಎಂ ಆಗೋಣ ಎಂದು ಪ್ರಯತ್ನ ಮಾಡುತ್ತಿದ್ದಾರೆ. ಕಾಂಗ್ರೆಸ್‌ನಲ್ಲೀಗ ಇಬ್ಬರ ಜಗಳ ಮೂರನೆಯವನಿಗೆ ಲಾಭ ಎನ್ನುವಂತಾಗಿದೆ ಎಂದು ಹೇಳಿದರು.

ಸಿನಿಮಾದ ಕ್ಲೈಮಾಕ್ಸ್‌ನಲ್ಲಿ ಆಗುವಂತೆಯೇ ಮಲ್ಲಿಕಾರ್ಜುನ ಖರ್ಗೆ ಬಂದಿದ್ದಾರೆ. ಮಾತುಕತೆಗೆ ಇನ್ನಷ್ಟು ಸಮಯಬೇಕೆಂದು ಅವರು ಹೇಳಿದ್ದಾರೆ. ಹಾಗೆಯೇ ಆದರೆ, ಸಿಎಂ ಬದಲಾವಣೆ ಬಹಳ ತಡವಾಗುತ್ತದೆ. ಆ ವೇಳೆಗೆ ಚುನಾವಣೆ ಸಮೀಪ ಬಂದಿರುತ್ತದೆ. ರಾಜಸ್ಥಾನ, ಮಧ್ಯಪ್ರದೇಶದಲ್ಲಾದಂತೆ ಕಾಂಗ್ರೆಸ್ ಗೊಂದಲದ ಗೂಡಾಗಿ ಸರ್ವನಾಶವಾಗಲಿದೆ ಎಂದು ತಿಳಿಸಿದರು.

"ಕಾಂಗ್ರೆಸ್‌ನ ಆಂತರಿಕ ಜಗಳಗಳಲ್ಲಿ ನಮಗೆ ಯಾವುದೇ ಆಸಕ್ತಿ ಇಲ್ಲ. ಆದರೆ, ಈ ಅಂತ್ಯವಿಲ್ಲದ ಘರ್ಷಣೆ ರಾಜ್ಯದ ಆಡಳಿತವನ್ನು ಕುಗ್ಗಿಸುತ್ತಿದೆ ಹೀಗಾಗಿ ಮಾತನಾಡುವುದು ನಮ್ಮ ಕರ್ತವ್ಯವಾಗುತ್ತದೆ. 1,000 ದಿನಗಳಿಗೂ ಹೆಚ್ಚು ಕಾಲ, ರಾಜ್ಯವು ವಿಚಲಿತ, ವಿಭಜಿತ ಮತ್ತು ದಿಕ್ಕಿಲ್ಲದ ಸರ್ಕಾರವನ್ನು ಕಂಡಿದೆ. ಈಗ, ಬೆಂಗಳೂರಿನ ಪರಿಸ್ಥಿತಿಯನ್ನು ಸರಿಪಡಿಸಲು ದೆಹಲಿಯಿಂದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು 'ನಿಯೋಜಿಸಲಾಗಿದೆ ಎಂದು ಟೀಕಿಸಿದ್ದಾರೆ.

ಪ್ರತಿ 15 ದಿನಗಳಿಗೊಮ್ಮೆ ಬೆಂಗಳೂರು ನಗರಕ್ಕೆ ಪರಿಶೀಲನಾ ಪ್ರವಾಸಕ್ಕೆ ಹೋಗುವುದಾಗಿ ಮುಖ್ಯಮಂತ್ರಿಗಳು ಈ ಹಿಂದೆ ಘೋಷಿಸಿದ್ದರು. ಆದರೆ ಮೂರು ತಿಂಗಳಲ್ಲಿ ಒಂದೂ ಪರಿಶೀಲನೆಯನ್ನು ಮಾಡಿಲ್ಲ. ಮಳೆಗೆ ಯಾವುದೇ ಸಿದ್ಧತೆಗಳನ್ನು ಮಾಡಿಕೊಳ್ಳದ ಕಾರಣ ಜೀವಗಳು ಬಲಿಯಾಗಿವೆ. ಸಾವಿಗೆ ನ್ಯಾಯ ಕೊಡಿ ಎಂದು ಜನರು ಕೇಳಿದರೆ, ತಮ್ಮ ತಪ್ಪನ್ನು ಮುಚ್ಚಿಟ್ಟು ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡಿದ್ದಾರೆ.

ಒಂದು ತಿಂಗಳ ಮುನ್ನ ಸಭೆ ನಡೆಸಿ, ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳ ಬಗ್ಗೆ ವರದಿ ಪಡೆದು ದುರಸ್ತಿ ಮಾಡಿಸಬೇಕಿತ್ತು. ನೀರು ನಿಲ್ಲುವ ಕಡೆ ನೀರು ಹರಿದುಹೋಗಲು ವ್ಯವಸ್ಥೆ ಮಾಡಬೇಕಿತ್ತು. ಏನೂ ಮಾಡದೆಯೇ ಬೌರಿಂಗ್ ಆಸ್ಪತ್ರೆ ಮುಖ್ಯಸ್ಥರ ವಿರುದ್ಧ, ಎಂಜಿನಿಯರ್‌ಗಳ ವಿರುದ್ಧ ಕ್ರಮ ವಹಿಸಿದ್ದಾರೆ. ಆಸ್ಪತ್ರೆ ಮುಖ್ಯಸ್ಥರು ರೋಗಿಗಳಿಗೆ ಹೇಗೆ ಚಿಕಿತ್ಸೆ ನೀಡಬೇಕೆಂದು ನೋಡುತ್ತಾರೆಯೋ ಹೊರತು, ಕಾಂಪೌಂಡ್ ದುರಸ್ತಿ ಮಾಡುವುದು ಅವರ ಜವಾಬ್ದಾರಿಯಲ್ಲ. ಈ ಸಾವುಗಳಿಗೆ ಮುಖ್ಯಮಂತ್ರಿಯೇ ನೇರ ಕಾರಣ. ಇದರಲ್ಲಿ ಅಧಿಕಾರಿಗಳ ತಪ್ಪಿಲ್ಲ ಎಂದರು.

## ಯುದ್ಧಾಂತ್ಯದ ನಂತರ ವಾಣಿಜ್ಯ ಸಿಲಿಂಡರ್ ದರ ಇಳಿಕೆ



ಬೆಂಗಳೂರು: ವಾಣಿಜ್ಯ ಸಿಲಿಂಡರ್‌ಗಳ ಬೆಲೆ ಏರಿಕೆ ತೈಲ ಕಂಪನಿಗಳ ನಿರ್ಧಾರವಾಗಿದೆ ಎಂದಿರುವ ಕೇಂದ್ರ ಆಹಾರ ಸಚಿವ ಪ್ರಹ್ಲಾದ್ ಜೋಷಿ, ವಿಶ್ವದಾದ್ಯಂತ ಇಂಧನದ ಬಿಕ್ಕಟ್ಟು ಆರಂಭವಾಗಿದೆ. ಜಾಗತಿಕ ಸ್ಥಿತಿಗತಿ ಆಧಾರದ ಮೇರೆಗೆ ಕಂಪನಿಗಳು ಎಲ್‌ಪಿಜಿ ಬೆಲೆ ಏರಿಕೆ ಮಾಡಿವೆ. ಯುದ್ಧ ಕೊನೆಗೊಂಡ ಬಳಿಕ ಮತ್ತೆ ಬೆಲೆ ಇಳಿಕೆಯಾಗಲಿದೆ ಎಂದರು.

ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಗತ್ತಿನ ಅನೇಕ ದೇಶಗಳಲ್ಲಿ ಪೆಟ್ರೋಲ್, ಡೀಸೆಲ್ ಸಿಗುತ್ತಿಲ್ಲ. ಪಾಕಿಸ್ತಾನ ಸೇರಿ ಹಲವು ದರಿದ್ರ ದೇಶಗಳಲ್ಲೂ ಜನಜೀವನ ಅಸ್ತವ್ಯಸ್ತವಾಗಿದೆ. ಭಾರತದಲ್ಲಿ ಇಂತಹ ಸ್ಥಿತಿ ಇಲ್ಲ. ನೈಸರ್ಗಿಕ ಅನಿಲ, ಪೆಟ್ರೋಲ್ ಹಾಗೂ ಡೀಸೆಲ್‌ಗೆ ತೊಂದರೆಯಾಗಿಲ್ಲ ಎಂದರು.

2004 ರಿಂದ 2014ರ ವರೆಗೂ ಕೇಂದ್ರದಲ್ಲಿ ಅಧಿಕಾರದಲ್ಲಿದ್ದ ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರ ಇಂಧನ ಬೆಲೆ ಏರಿಕೆಯ ತೀರ್ಮಾನವನ್ನು ಕಂಪನಿಗಳಿಗೆ ನೀಡಿದೆ. ಈ ಅಧಿಕಾರ ಬಳಸಿಕೊಂಡು ಕಂಪನಿಗಳು ನಿರ್ಧಾರ ಕೈಗೊಳ್ಳುತ್ತಿವೆ. ಆದರೂ ಗೃಹ ಬಳಕೆ ಎಲ್‌ಪಿಜಿ, ಪೆಟ್ರೋಲ್ ಹಾಗೂ ಡೀಸೆಲ್ ಬೆಲೆ ಏರಿಕೆಯಾಗದಂತೆ ಕೇಂದ್ರ ಸರ್ಕಾರ ಕ್ರಮ ಕೈಗೊಂಡಿದೆ ಎಂದರು.

ಭಾರತಕ್ಕೆ ಅಗತ್ಯವಿರುವ ಶೇ. 50 ರಷ್ಟು ಇಂಧನ ವಿದೇಶದಿಂದ ಆಮದು ಆಗುತ್ತದೆ. ಹೊರ್ಮುಜ್ ಜಲಸಂಧಿಯ ಮೂಲಕವೇ ಹೆಚ್ಚಿನ ಇಂಧನ ಬರುತ್ತದೆ. ಹೊರ್ಮುಜ್ ಜಲಸಂಧಿಯ ಸಮಸ್ಯೆ ಬಗೆಹರಿದರೆ ಎಲ್ಲವೂ ಸರಿ ಹೋಗುತ್ತದೆ ಎಂದು ಹೇಳಿದರು.

**ಸರ್ಕಾರದ ವಿರುದ್ಧ ವಾಗ್ದಾಳಿ**

ರಾಜ್ಯದಲ್ಲಿ ಅಧಿಕಾರ ಹಂಚಿಕೆಯ ಗೊಂದಲದಿಂದ ಭ್ರಷ್ಟಾಚಾರ ಮಿತಿ ಮೀರಿದೆ. ಸರ್ಕಾರಿ ನೌಕರರಿಗೆ ವೇತನ ನೀಡಲು ಹಣ ಇಲ್ಲದಂತಹ ಪರಿಸ್ಥಿತಿ ರೂಪುಗೊಂಡಿದೆ ಎಂದು ಟೀಕಿಸಿದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರನ್ನು ಮುಖ್ಯಮಂತ್ರಿಯನ್ನಾಗಿಸುವ ಚರ್ಚೆಯನ್ನು ಕಾಂಗ್ರೆಸ್ ಹೈಕಮಾಂಡ್ ಆರಂಭಿಸಿದೆ. ಕಾಂಗ್ರೆಸ್ ಯಾರನ್ನೇ ಮುಖ್ಯಮಂತ್ರಿ ಮಾಡುವ ನಿರ್ಧಾರ ಕೈಗೊಂಡರೂ ಅದಕ್ಕೂ ನಮಗೂ ಸಂಬಂಧವಿಲ್ಲ ಎಂದು ಹೇಳಿದರು.

## ನಿಮ್ರಾ ಮಸೀದಿ ಬಳಿ ಮದ್ಯದ ಅಂಗಡಿ ಆರಂಭ ಅಂಜುಮನ್ ಸಂಸ್ಥೆ ಹಾಗೂ ಸಾರ್ವಜನಿಕರಿಂದ ತೀವ್ರ ಆಕ್ರೋಶ



**ವರದಿ: ಯಾಸಿನ ಝಾರೆ, ಅಥಣಿ**

**ಬೆಳಗಾವಿ ವಾರ್ತೆ ಅಥಣಿ:** ಪಟ್ಟಣದ ಅಥಣಿ ಗೋಕಾಕ ರಸ್ತೆಯಲ್ಲಿರುವ ನಿಮ್ರಾ ಮಸೀದಿ ಹಾಗೂ ರಾಜ್ಯ ಹೆದ್ದಾರಿಯ ಪಕ್ಕದಲ್ಲಿ ನೂತನವಾಗಿ ವೈನ್ಸ್ ಮತ್ತು ಬಾರ್ ಆರಂಭಿಸಲು ಸಿದ್ಧತೆ ನಡೆಯುತ್ತಿದ್ದು, ಇದಕ್ಕೆ ಅಂಜುಮನ್ ಸಂಸ್ಥೆ ಹಾಗೂ ಮುಸ್ಲಿಂ ಸಮಾಜದ ಬಾಂಧವರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಯಾವುದೇ ಕಾರಣಕ್ಕೂ ಈ ಪ್ರದೇಶದಲ್ಲಿ ಮದ್ಯ ಮಾರಾಟಕ್ಕೆ ಪರವಾನಗಿ ನೀಡಬಾರದೆಂದು ಆಗ್ರಹಿಸಿ ತಹಸೀಲ್ದಾರ, ಅಬಕಾರಿ ಇಲಾಖೆ ಹಾಗೂ ಪೊಲೀಸ್ ಠಾಣೆಗೆ ಮನವಿ ಸಲ್ಲಿಸಲಾಯಿತು.

ಮದ್ಯದ ಅಂಗಡಿ ಅಥವಾ ಎಂ.ಎಸ್.ಐ.ಎಲ್ ಸ್ಥಾಪನೆಗೆ ಅಬಕಾರಿ ನಿಯಮಗಳ ಪ್ರಕಾರ ವಸತಿ ಪ್ರದೇಶ, ಧಾರ್ಮಿಕ ಸ್ಥಳ, ಆಸ್ಪತ್ರೆ ಹಾಗೂ ಶಾಲೆಗಳಿಂದ ಕನಿಷ್ಠ 100 ಮೀಟರ್ ದೂರವಿರಬೇಕು. ಅಲ್ಲದೆ, ಸುಪ್ರೀಂ ಕೋರ್ಟ್ ಮಾರ್ಗಸೂಚಿಯಂತೆ ರಾಜ್ಯ ಹೆದ್ದಾರಿಯಿಂದಲೂ ನಿಗದಿತ ದೂರ ಕಾಯ್ದುಕೊಳ್ಳುವುದು ಕಡ್ಡಾಯ. ಆದರೆ, ಈಗ ಉದ್ದೇಶಿತ ಮದ್ಯದ ಅಂಗಡಿಯು ನಿಮ್ರಾ ಮಸೀದಿಯ ತೀರ ಹತ್ತಿರದಲ್ಲಿದ್ದು, ರಾಜ್ಯ ಹೆದ್ದಾರಿಗೆ ಹೊಂದಿಕೊಂಡಿದೆ. ಇದರ ಸುತ್ತಮುತ್ತ ದಟ್ಟವಾದ ವಸತಿ ಪ್ರದೇಶಗಳಿರುವುದು ಸಾರ್ವಜನಿಕರ ಆತಂಕಕ್ಕೆ ಕಾರಣವಾಗಿದೆ.

ಈ ಭಾಗದಲ್ಲಿ ಮದ್ಯದ ಅಂಗಡಿ ತೆರೆಯುವುದರಿಂದ ವಸತಿ ಪ್ರದೇಶದ ಮಹಿಳೆಯರು, ಮಕ್ಕಳು ಹಾಗೂ ಮಸೀದಿಗೆ ಬರುವ ಭಕ್ತಾದಿಗಳಿಗೆ ಸಂಚಾರ ಮಾಡಲು ಮತ್ತು ಶಾಂತಿಯುತವಾಗಿ ಬದುಕಲು ತೊಂದರೆಯಾಗುತ್ತದೆ. ಮದ್ಯಪಾನಿಗಳ ಹಾವಳಿಯಿಂದ ಸಾರ್ವಜನಿಕ ಶಾಂತಿಗೆ ಧಕ್ಕೆಯಾಗುವ ಸಾಧ್ಯತೆ ಇದೆ," ಎಂದು ಪ್ರತಿಭಟನಾಕಾರರು ಆಕ್ರೋಶ ಹೊರಹಾಕಿದರು.

ಸಾರ್ವಜನಿಕ ಹಿತದೃಷ್ಟಿಯಿಂದ ಈ ಕೂಡಲೇ ಪರವಾನಗಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಬೇಕು ಎಂದು ಒತ್ತಾಯಿಸಿ ನಿಮ್ರಾ ಮಸೀದಿ ಆವರಣದಲ್ಲಿ ಸಾವಿರಾರು ಸಂಖ್ಯೆಯಲ್ಲಿ ಮುಸ್ಲಿಂ ಸಮಾಜದ ಬಾಂಧವರು ಸೇರಿ ಶಾಂತಿಯುತವಾಗಿ ಪ್ರತಿಭಟನೆ ನಡೆಸಿದರು. ಬಳಿಕ ತಹಸೀಲ್ದಾರ್, ಅಬಕಾರಿ ಅಧಿಕಾರಿಗಳು ಹಾಗೂ ಪೊಲೀಸ್ ನಿರೀಕ್ಷಕರಿಗೆ ಮನವಿ ಪತ್ರ ಸಲ್ಲಿಸಿ, ಕೂಡಲೇ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.

ಈ ವೇಳೆ ಮಾತನಾಡಿದ ಮುಸ್ಲಿಮ ಧರ್ಮ ಗುರು ಮೌಲಾನಾ ಅಬ್ಬಾಸ್ ಅವರು ಪ್ರತಿಯೊಂದು ಧರ್ಮದಲ್ಲೂ ಆಯಾ ಧರ್ಮದ ಪವಿತ್ರ ಕೇಂದ್ರಗಳಿಗೆ ಅತ್ಯುನ್ನತ ಸ್ಥಾನವಿದೆ. ಮುಸ್ಲಿಮರಿಗೆ ಮಸೀದಿ, ಹಿಂದೂಗಳಿಗೆ ಮಂದಿರ ಸೇರಿದಂತೆ ಎಲ್ಲಾ ಧರ್ಮದವರಿಗೂ ಅವರದ್ದೇ ಆದ ಶ್ರದ್ಧಾ ಕೇಂದ್ರಗಳಿವೆ. ಇಂತಹ ಪವಿತ್ರ ಸ್ಥಳಗಳ ಆಸುಪಾಸಿನಲ್ಲಿ ಮದ್ಯದ ಅಂಗಡಿ ಅಥವಾ ಬಾರ್‌ಗಳು ಇರುವುದನ್ನು ಯಾವುದೇ ಧರ್ಮದ ಜನರು ಇಷ್ಟಪಡುವುದಿಲ್ಲ. ಇದು ಸಮಾಜದ ಶಾಂತಿ ಮತ್ತು ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವ ವಿಷಯವಾಗಿದೆ.

ನಮ್ಮ ತಾಲೂಕು ಇದುವರೆಗೂ ಭಾವೈಕ್ಯತೆ ಮತ್ತು ಸೌಹಾರ್ದತೆಗೆ ಹೆಸರುವಾಸಿಯಾಗಿದೆ. ವಿವಿಧ ಧರ್ಮದ ಜನರು ಪರಸ್ಪರ ಪ್ರೀತಿ ಮತ್ತು ಒಗ್ಗಟ್ಟಿನಿಂದ ಬದುಕುತ್ತಿದ್ದೇವೆ. ಈ ಸೌಹಾರ್ದತೆಯು ಮುಂದೆಯೂ ಹೀಗೆಯೇ ಮುಂದುವರಿಯಬೇಕೆಂದು ನಾವು ಆಶಿಸುತ್ತೇವೆ.

ಆದ್ದರಿಂದ, ಸಾರ್ವಜನಿಕರ ಹಿತದೃಷ್ಟಿಯಿಂದ ಮತ್ತು ಈ ಪ್ರದೇಶದ ಪವಿತ್ರತೆಯನ್ನು ಕಾಪಾಡುವ ಸಲುವಾಗಿ, ಮಸೀದಿಯ ಸಮೀಪ ಯಾವುದೇ ಕಾರಣಕ್ಕೂ ಮದ್ಯ ಮಾರಾಟದ ಪರವಾನಗಿಯನ್ನು ನೀಡಬಾರದೆಂದು ನಾವು ತಮ್ಮಲ್ಲಿ ವಿನಂತಿಸಿಕೊಳ್ಳುತ್ತೇವೆ. ಜನಸಾಮಾನ್ಯರ ಭಾವನೆಗಳನ್ನು ಗೌರವಿಸಿ ತಾವು ಸೂಕ್ತ ಕ್ರಮ ಕೈಗೊಳ್ಳುತ್ತೀರೆಂದು ನಂಬಿದ್ದೇವೆ ಎಂದರು

ಈ ಸಂದರ್ಭದಲ್ಲಿ ಮೌಲಾನಾ ಜುಬೇರ,ಮೌಲಾನಾ ಇಸಾಕ,ಅಂಜುಮನ ಇಸ್ಲಾಂ ಕಮಿಟಿ ತಾಲೂಕ ಅಧ್ಯಕ್ಷ ಸಯ್ಯದ ಅಮೀನ ಗದ್ಯಾಳ, ಜುಬೇರ ನಾಲ್ಬಂದ್,ಯುನೂಸ ಮುಲ್ಲಾ, ಅಸ್ಲಂ ನಾಲಬಂದ, ಬುಡ್ಡು ನಾಲಬಂದ,ರಿಯಾಜ್ ಸನದಿ, ಅಬ್ದುಲ ಅಜೀಜ್ ಮುಲ್ಲಾ, ಅಬಿದ್ ಮಾಸ್ಟರ್,, ಸಯ್ಯದ ಗಡ್ಡೆಕರ, ಸಲ್ಮಾನ್ ಮೌಲ್ವಿ, ಅಬೂಬಕರ್ ಕೊಕಟನೂರ, ಇಮ್ರಾನ್ ಪಟಾಯತ,ರಿಯಾಜ ಸನದಿ, ಬಾಬು ಖೇಮಲಾಪುರ, ಮಂಜು ಹೋಳಿಕಟ್ಟಿ, ಮುಸ್ತಾಕ ಮುಲ್ಲಾ, ಐ ಜಿ ಬಿರಾದರ್,ಶಾಮುಶುದ್ದಿನ್ ಡಾಂಗೆ, ಅಜಹರ್ ಮುಲ್ಲಾ, ಉಮರ್ ನಾಲಬಂದ,ಸೇರಿದಂತೆ ಸಾವಿರಾರು ಸಂಖ್ಯೆಯಲ್ಲಿ ಮುಸ್ಲಿಂ ಬಾಂಧವರು ಹಾಗೂ ಮುಖಂಡರು ಭಾಗವಹಿಸಿದ್ದರು.

## ಸಡಗರ ಸಂಭ್ರಮದಿಂದ ಜರುಗಿದ ಜಾತ್ರಾ ಮಹೋತ್ಸವ



**ಬೆಳಗಾವಿ ವಾರ್ತೆ ಉಗರಗೋಳ:** ಸವದತ್ತಿ ತಾಲೂಕಿನ ಚಿಕ್ಕುಂಬಿ ಗ್ರಾಮದಲ್ಲಿ ಶುಕ್ರವಾರ ಶ್ರೀ ಕಲ್ಮೇಶ್ವರ ಅಜ್ಜನವರ ಮಹಾರಥೋತ್ಸವದ ಜಾತ್ರಾ ಮಹೋತ್ಸವ ಹಾಗೂ ಅಡ್ಡ ಪಲ್ಲಕ್ಕಿ ಉತ್ಸವ ಅದ್ದೂರಿಯಾಗಿ ಸಡಗರ ಸಂಭ್ರಮದಿಂದ ಆಚರಿಸಲಾಯಿತು. ಗ್ರಾಮದಲ್ಲಿನ ಮನೆಗಳೆಲ್ಲ ನವವಧು ವಿನಂತೆ ಸಿಂಗಾರಗೊಂಡಿದ್ದವು ಬೆಳಗ್ಗೆ ಶ್ರೀ ಕಲ್ಮೇಶ್ವರ ಅಜ್ಜನವರ ಗದ್ದುಗೆಗೆ ಮಹಾರುದ್ರಾಭಿಷೇಕ, ಪೂಜಾಅಲಂಕಾರ, ಅಡ್ಡ ಪಲ್ಲಕ್ಕಿ ಉತ್ಸವ ಹಾಗೂ ಸಂಜೆ ಸಾವಿರಾರೂ ಭಕ್ತರ ನಡುವೆ ಅದ್ದೂರಿ ಮಹಾರಥೋತ್ಸವ ಜರುಗಿತು

ಪೂಜ್ಯ ಶಿವಶಂಕರ ಶಿವಾಚಾರ್ಯ ಶ್ರೀಗಳು ರಥೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿ ತೃಪ್ತಿದಾಯಕ ಬದುಕಿಗೆ ಆಧ್ಯಾತ್ಮವೇ ಮೂಲ. ಪ್ರತಿಯೊಬ್ಬರು ಒತ್ತಡದ ಬದುಕಿನ ಜಂಜಾಟದ ಮಧ್ಯೆಯೂ ಆಧ್ಯಾತ್ಮ ಚಟುವಟಿಕೆಯತ್ತ ಒಲವು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ನರಗುಂದ ಪತ್ರಿವನಮಠದ ಗುರು ಸಿದ್ದವೀರ ಶಿವಾಚಾರ್ಯ ಶ್ರೀಗಳು, ಹೂಲಿಯ ಉಮೇಶ್ವರ ಶಿವಾಚಾರ್ಯ ಶ್ರೀಗಳು, ಗೋವಿಂದರಡ್ಡಿ ಮುಳ್ಳೂರ, ಚಂಬಣ್ಣಾ ಅಂಗಡಿ, ಚಿದಾನಂದ ನೀಲಪ್ಪನವರ, ಕಲ್ಲಪ್ಪ ನೀಲಪ್ಪನವರ, ಪುಂಡಲೀಕ ಗೊವಣ್ಣವರ, ಮಮ್ಮದಲಿ ದೊಡಮನಿ, ಹನಮಂತ ಮಡಿವಾಳರ, ಮಲ್ಲಿಕಾರ್ಜುನ ಸುಳ್ಳದ, ಮಹಾಂತೇಶ ಹಿರೇಮಠ, ಮಹಾಂತೇಶ ಬುದನ್ನವರ, ಪರಮೇಶ ಬೆಡಸೂರ, ಕಲ್ಲಪ್ಪ ವಾರೆಪ್ಪನವರ, ಮಲ್ಲಿಕಾರ್ಜುನ ನಾಯ್ಕರ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಇದ್ದರು.

ಈ ಜಾತ್ರೆಗೆ ಚಿಕ್ಕುಂಬಿ ಮಾತ್ರವಲ್ಲ, ಉಗರಗೋಳ, ಸವದತ್ತಿ, ಧಾರವಾಡ, ಹಂಚಿನಾಳ, ಧಡೇರಕೊಪ್ಪ, ನರಗುಂದ, ನವಲಗುಂದ, ಚುಳಕಿ, ಹೂಲಿ, ಬೇರೆ ಬೇರೆ ಜಿಲ್ಲೆಗಳಿಂದಲೂ ಭಕ್ತರು ಸೇರಿದ್ದರು.

## ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕಗಳಿಸಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಸನ್ಮಾನ

**ಬೆಳಗಾವಿ ವಾರ್ತೆ ಉಗರಗೋಳ:** ಸವದತ್ತಿ ತಾಲೂಕಿನ ಉಗರಗೋಳ ಗ್ರಾಮ ಪಂಚಾಯತಿಯಲ್ಲಿ ಶನಿವಾರ ರಂದು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿ ಸಾಧನೆಗೈದ ನಾಲ್ಕು ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿನಿ ರೇಣುಕಾ ನಾಡಗೌಡ ಮಾತನಾಡಿ ನಿರಂತರ ಓದಿನಿಂದ ವಿದ್ಯಾರ್ಥಿಗಳಲ್ಲಿನ ಜ್ಞಾನದ ಮಟ್ಟ ದಿನದಿಂದ ದಿನಕ್ಕೆ ಉನ್ನತೀಕರಣಗೊಂಡು, ಭವಿಷ್ಯದಲ್ಲಿ ಉತ್ತಮ ಸಾಧನೆಗೆ ದಾರಿಯಾಗುತ್ತದೆ ಎಂದ ಅವರು. ಗ್ರಾಮೀಣ ಪ್ರದೇಶದ ಹರ್ಲಾಪೂರ ಹಾಗೂ ಉಗರಗೋಳದ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ ಎಂದರು.

ಉಗರಗೋಳ ಗ್ರಾಮ ಪಂಚಾಯತಿಯಿಂದ ಹೆಚ್ಚು ಅಂಕ ಪಡೆದ ಹರ್ಲಾಪೂರದ ಕುಮಾರ–ಶಿವಪ್ಪ ದೊಡ್ಡಯಲ್ಲಪ್ಪ ಘಂಟಿ, ಹಾಗೂ ಉಗರಗೋಳದವರಾದ ಕುಮಾರ–ಪ್ರೀತಮ ಉಮೇಶ ಮುರಗೋಡ, ಕುಮಾರ–ಮಹೇಶ ಮಲ್ಲಿಕಾರ್ಜುನ ಉಮರಾಣಿ, ಕುಮಾರ–ರೋಹಿತ ಈರಣ್ಣಾ ಇಮರಾಪೂರ ವಿದ್ಯಾರ್ಥಿಗಳನ್ನು ಪ್ರತ್ಸಾಹ ಹಣ ನೀಡಿ ಸನ್ಮಾನಿಸಲಾಯಿತು.



ರೇಣುಕಾ ನಾಡಗೌಡ, ಎಫ್ ಎಸ್ ಕಾಳಿ, ವಾಯ್ ಕೆ ಕುಳ್ಳೂರ, ಬಿ ಎಸ್ ಜಾಲಗಾರ, ಯಲ್ಲಪ್ಪ ಸಂಬರಗಿ, ಯಲ್ಲಪ್ಪ ಹನಶಿ, ಬಿ ಆರ್ ಭಜಂತ್ರಿ, ಎಸ್ ಆಯ್ ವಗ್ಗಣ್ಣವರ, ಶ್ರೀದೇವಿ ಶಿದ್ದಕ್ಕನವರ, ಎಫ್ ವಾಯ್ ತಳವಾರ, ಈರಣ್ಣ ಇಮರಾಪೂರ, ಬಸವರಾಜ ಪೊಲೇಶಿ, ಯಲ್ಲಪ್ಪ ಘಂಟಿ ಹಾಗೂ ಗ್ರಾಮ ಪಂಚಾಯತ ಸಿಬ್ಬಂದಿ ಮತ್ತು ಗ್ರಾಮಸ್ಥರು ಇದ್ದರು.



**ಬೆಳಗಾವಿ ವಾರ್ತೆ ಉಗರಗೋಳ:** ಶ್ರೀಕ್ಷೇತ್ರ ಯಲ್ಲಮ್ಮನ ಗುಡ್ಡಕ್ಕೆ ಶನಿವಾರ ರಂದು ನವಲಗುಂದ ಶಾಸಕ ಎನ್ ಎಚ್ ಕೋನರಡ್ಡಿ ಕುಟುಂಬ ಸಮೇತ ಭೇಟಿ ನೀಡಿ ಶ್ರೀದೇವಿಯ ದರ್ಶನ ಆಶೀರ್ವಾದ ಪಡೆದುಕೊಂಡರು.

ಶ್ರೀಕ್ಷೇತ್ರ ಯಲ್ಲಮ್ಮ ದೇವಸ್ಥಾನ ವತಿಯಿಂದ ಶಾಸಕ ಎನ್ ಎಚ್ ಕೋನರಡ್ಡಿ ಅವರನ್ನು ಸತ್ಕರಿಸಲಾಯಿತು.

ಪತ್ರಿಕೆಯೊಂದಿಗೆ ಮಾತನಾಡಿದ ಕೋನರಡ್ಡಿ, ರೈತಾಪಿ ವರ್ಗಕ್ಕೂ ಹಾಗೂ ಸಕಲ ಜೀವರಾಶಿಗೂ ಒಳತಿಗಾಗಿ ಮತ್ತು ಜನರ ಜೀವನಾಡಿಯಾದ ಮಲಪ್ರಭೆಗೆ ಕಳಸಾ ಬಂಡೂರಿ ನಾಲ ಬೇಗನೆ ಜೋಡನೆ ಆಗಲಿ ಎಂದು ಆಧಿಶಕ್ತಿ ರೇಣುಕಾ ಯಲ್ಲಮ್ಮಾ ದೇವಿಯಲ್ಲಿ ಪ್ರಾರ್ಥಿಸಲಾಯಿತು ಎಂದರು.

ತಹಶೀಲ್ದಾರ ಮಲ್ಲಿಕಾರ್ಜುನ ಹೇಗ್ಗಣ್ಣವರ, ಮುನಿರಡ್ಡಿ, ಮನೀಶಾ, ಶ್ರೀನಿವಾಸರಡ್ಡಿ, ಬಿ ಟಿ ರಾಜೇಶ, ಡಾ, ಗಿರೀಶ ರಾಘಣ್ಣವರ, ಪರಸನಗೌಡ ರೇಣ್ಕೀಗೌಡ್ರ, ಪಂಡಿತ ಪಿ ರಾಜಶೇಖರಯ್ಯ, ಬಿ ಆರ್ ಸಣ್ಣಮಾಳಗೆ ಹಾಗೂ ಇತರರಿದ್ದರು.

# ಕಟ್ಟಡ ಕಾರ್ಮಿಕರಿಗೆ ಸರ್ಕಾರದ ಯೋಜನೆಗಳು ಶ್ರೀರಕ್ಷೆ



**ಬೆಳಗಾವಿ ವಾರ್ತೆ ಗದಗ:** "ದೇಶದ ಭವ್ಯ ಭವಿಷ್ಯವನ್ನು ನಿರ್ಮಿಸುವಲ್ಲಿ ಕಟ್ಟಡ ಕಾರ್ಮಿಕರ ಪಾತ್ರ ಅನನ್ಯ. ಅಹರ್ನಿಶಿ ಬೆವರು ಸುರಿಸಿ ದುಡಿಯುವ ಕಾರ್ಮಿಕರ ಹಿತರಕ್ಷಣೆಗಾಗಿ ಸರ್ಕಾರ ಜಾರಿಗೆ ತಂದಿರುವ ವಿವಿಧ ಯೋಜನೆಗಳು ಅವರಿಗೆ ಶ್ರೀರಕ್ಷೆಯಾಗಿವೆ" ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್ ಅವರು ಹೇಳಿದರು.

ನಗರದ ಡಿ. ಸಿ. ಮಿಲ್ ಕಂಪೌಂಡ ಒಳಗಡೆ ಕೆ. ಎಚ್. ಪಾಟೀಲ ನಗರದಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ಕಟ್ಟಡ ನಿರ್ಮಾಣ ಕಾರ್ಮಿಕರ ಮಹಾ ಸಂಘ ಗದಗ ಬೆಟಗೇರಿ ಇವರಿಂದ "ಕಾರ್ಮಿಕ ದಿನಾಚರಣೆ" ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಶಿಕ್ಷಣಕ್ಕೆ ಮೊದಲ ಆದ್ಯತೆ ಎಸ್ಎಸ್ಎಲ್‌ಸಿ ಹಾಗೂ ಪಿಯುಸಿಯಲ್ಲಿ ಶೇ. 85 ಕ್ಕೂ ಹೆಚ್ಚು ಅಂಕ ಪಡೆದ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಕಾರ್ಮಿಕರ ಮಕ್ಕಳು ಶೈಕ್ಷಣಿಕವಾಗಿ ಮುಂಚೂಣಿಗೆ ಬರಬೇಕೆನ್ನುವುದು ಆಶಯವಾಗಿದೆ ಎಂದು ಸಚಿವರು ತಿಳಿಸಿದರು.

ಕಾರ್ಮಿಕರ ಪಾತ್ರ ಶ್ಲಾಘನೀಯ ನಮ್ಮ ಕಣ್ಣಿಗೆ ಕಾಣುವ ರಸ್ತೆ, ಫ್ಲೈ ಓವರ್, ಕಾಲೇಜುಗಳು, ಮ್ಯೂಸಿಯಂ ಹಾಗೂ ಗುಡಿ-ಗುಂಡಾರಗಳನ್ನು ನಿರ್ಮಿಸುವವರು ಕಾರ್ಮಿಕರು ಸಾವಿರಾರು ವರ್ಷಗಳ ಕಾಲ ಉಳಿಯುವ ಇಂತಹ ಸ್ಮಾರಕಗಳ ಹಿಂದೆ ಕಾರ್ಮಿಕರ ರಕ್ತ ಮತ್ತು ಬೆವರಿದೆ ಎಂದು ಅವರು ಭಾವುಕರಾಗಿ ನುಡಿದರು.

ಕಾನೂನಿನ ಇತಿಹಾಸ ದೇಶದಲ್ಲಿ ಕಾರ್ಮಿಕ ಕಲ್ಯಾಣ ಕಾನೂನುಗಳನ್ನು ಜಾರಿಗೆ ತರುವಲ್ಲಿ ಆಸ್ಕರ್ ಫರ್ನಾಂಡಿಸ್ ಮತ್ತು ಮಲ್ಲಿಕಾರ್ಜುನ ಖರ್ಗೆ ಅವರ ಕೊಡುಗೆ ಅಪಾರ. ಅವರ ಪ್ರಯತ್ನದಿಂದಾಗಿ ಇಂದು ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಲಭಿಸುತ್ತಿದೆ ಎಂದು ಸ್ಮರಿಸಿದರು.

ಕಾರ್ಮಿಕ ಕಾರ್ಡ್‌ನ ಮಹತ್ವ ಎಂತದ್ದು ಎಂದರೆ "ಕಟ್ಟಡ ಕಾರ್ಮಿಕ ಕಾರ್ಡ್" ಎಂಬುದು ಕೇವಲ ಚೀಟಿಯಲ್ಲ, ಅದು ಕಾರ್ಮಿಕರಿಗೆ ಒಂದು ಸರ್ಕಾರಿ ನೌಕರಿಯಷ್ಟೇ ಸಮಾನವಾದ ಭದ್ರತೆ ನೀಡುತ್ತದೆ. ಕೊರೊನಾ ಅಂತಹ ಸಂಕಷ್ಟದ ಸಮಯದಲ್ಲಿ ಕಾರ್ಮಿಕರಿಗೆ ಈ ಕಾರ್ಡ್ ಮೂಲಕ ವಿತರಿಸಲಾದ ಕಿಟ್‌ಗಳು ಮತ್ತು ಸಹಾಯಹಸ್ತ ದೊಡ್ಡ ನೆರವು ನೀಡಿದೆ ಎಂದು ಅವರು ಹೇಳಿದರು.

ಶೀಘ್ರ ಕಾರ್ಡ್ ವಿತರಣೆ ಇನ್ನು ಯಾರಾದರೂ ಅರ್ಹ ಫಲಾನುಭವಿಗಳು ಕಾರ್ಮಿಕ ಕಾರ್ಡ್‌ನಿಂದ ವಂಚಿತರಾಗಿದ್ದರೆ, ಅಂತಹವರು ಎಂಎಲ್‌ಎ ಕಚೇರಿ ಅಥವಾ ಕಾರ್ಮಿಕ ಸಂಘಟನೆಗೆ ಅರ್ಜಿ ಸಲ್ಲಿಸಿದರೆ ಒಂದು ವಾರದೊಳಗೆ ಕಾರ್ಡ್ ವಿತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಕಟ್ಟಡ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಗದಗ ಜಿಲ್ಲೆಯಲ್ಲಿ ಸುಸಜ್ಜಿತ ಕಾರ್ಮಿಕರ ಮಕ್ಕಳ ವಸತಿ ಶಾಲೆ ಮಂಜೂರಾಗಿದ್ದು, ಶೀಘ್ರದಲ್ಲೇ ಕಾಮಗಾರಿ ಆರಂಭವಾಗಲಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್ ಅವರು ಪ್ರಕಟಿಸಿದರು.

ಕಾರ್ಮಿಕರ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದು ಸರ್ಕಾರದ ಪ್ರಮುಖ ಗುರಿಯಾಗಿದೆ ಎಂದು ತಿಳಿಸಿದರು.

ವಸತಿ ಶಾಲೆಗಾಗಿ ಗದಗ ನಗರದ ಸಮೀಪವಿರುವ ಗುಡ್ಡದ ಸಾಲಿನಲ್ಲಿ, ನವೋದಯ ಶಾಲೆ ಹಾಗೂ ಮೈನಾರಿಟಿ ವಸತಿ ಶಾಲೆಗಳ ಪಕ್ಕದಲ್ಲೇ 10 ಎಕರೆ ವಿಶಾಲವಾದ ಭೂಮಿಯನ್ನು ಗುರುತಿಸಲಾಗಿದೆ. ಇದೇ ವರ್ಷದಲ್ಲಿ ವಸತಿ ಶಾಲೆಯ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲಾಗುವುದು. ಮುಂದಿನ ಶೈಕ್ಷಣಿಕ ವರ್ಷದಿಂದಲೇ ಶಾಲೆಯಲ್ಲಿ ಚಟುವಟಿಕೆಗಳು ಆರಂಭವಾಗುವಂತೆ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಶೈಕ್ಷಣಿಕ ಕಿಟ್‌ಗಳ ವಿತರಣೆ ರಾಜ್ಯದಾದ್ಯಂತ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಸರಿಸುಮಾರು 1111 ಕೋಟಿ ರೂಪಾಯಿ ವೆಚ್ಚದಲ್ಲಿ ಶೈಕ್ಷಣಿಕ ಕಿಟ್‌ಗಳನ್ನು ವಿತರಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದರು.

ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ 625 ಕ್ಕೆ 624 ಅಂಕ ಗಳಿಸಿ ಮರು ಮೌಲ್ಯಮಾಪನಕ್ಕೆ ಅರ್ಜಿಸಲ್ಲಿಸಿದ್ದ ವಿದ್ಯಾರ್ಥಿನಿಯ ಧೈರ್ಯವನ್ನು ಶ್ಲಾಘಿಸಿದ ಸಚಿವರು, ಕಾರ್ಮಿಕರ ಮಕ್ಕಳು ಕೂಡ ಇಂತಹ ಉನ್ನತ ಗುರಿಗಳನ್ನು ಹೊಂದಿರಬೇಕು ಎಂದು ಕರೆ ನೀಡಿದರು.

ಉನ್ನತ ಗುಣಮಟ್ಟದ ಶಿಕ್ಷಣಕ್ಕೆ ಮೊದಲ ಆದ್ಯತೆ ಕೊಡಬೇಕು, ನವೋದಯ ಮಾದರಿಯಲ್ಲೇ ಈ ವಸತಿ ಶಾಲೆಯು ಅತ್ಯಂತ ಸುಂದರವಾದ ಪರಿಸರದಲ್ಲಿ ನಿರ್ಮಾಣವಾಗಲಿದ್ದು, ಕಾರ್ಮಿಕರ ಮಕ್ಕಳಿಗೆ ಇದು ಹೊಸ ಭವಿಷ್ಯವನ್ನು ರೂಪಿಸಲಿದೆ.

ಕಾರ್ಯಕ್ರಮದಲ್ಲಿ ಅಭಿನವ ಕೊಟ್ಟೂರು ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿದ್ದರು ವಿಧಾನ ಪರಿಷತ್ ಶಾಸಕ ಎಸ್.ವಿ.ಸಂಕನೂರು, ನಾಗರಾಭಿವೃದ್ಧಿ ಪ್ರಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಜಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಕಟ್ಟಡ ನಿರ್ಮಾಣ ಕಾರ್ಮಿಕರ ಸಂಘದ ಅಧ್ಯಕ್ಷರಾದ ಮಹಬೂಬ್ ಖಾನ್ ಪಠಾಣ್, ನಗರಸಭೆ ಅಧ್ಯಕ್ಷರಾದ ಉಷಾ ದಾಸರ, ಡಾ. ಗಣೇಶ್ ರಾವ್ ಸೇರಿದಂತೆ ಕಾರ್ಮಿಕ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಸ್ಥಳೀಯ ಗಣ್ಯರು ಉಪಸ್ಥಿತರಿದ್ದರು.




**ಬೆಳಗಾವಿ ವಾರ್ತೆ ಬೆಳಗಾವಿ:** ಜಿಲ್ಲಾಧಿಕಾರಿಗಳು, ಯೋಜನಾ ನಿರ್ದೇಶಕರು, ನಗರಾಭಿವೃದ್ಧಿ ಕೋಶ ಬೆಳಗಾವಿ ಇವರ ನಿರ್ದೇಶನದ ಮೇರೆಗೆ ಮುನವಳ್ಳಿ ಪಟ್ಟಣದ ಬಸ್ ನಿಲ್ದಾಣದಲ್ಲಿ ಪುರಸಭೆಯವರಿಂದ ಪ್ರಯಾಣಿಕರಿಗೆ ಹಾಗೂ ಸಾರ್ವಜನಿಕರಿಗೆ ಬಿಸಿಲಿನ ತಾಪ ತಣಿಸಲು ತಂಪಾದ ನೀರಿನ ಅರವಟ್ಟಿಗೆಯನ್ನು ಸಾರ್ವಜನಿಕರಿಂದ ಉದ್ಘಾಟಿಸಲಾಗಿದ್ದು, ಸರ್ವರು ಇದರ ಸದುಪಯೋಗ ಪಡೆದುಕೊಳ್ಳಲು ಪುರಸಭೆ ಮುಖ್ಯಾಧಿಕಾರಿ ಎಮ್.ಎಮ್.ತಿಮ್ಮಾಣಿ ತಿಳಿಸಿದ್ದಾರೆ.

## ಗದುಗಿನಲ್ಲಿ ಸೆಪ್ಟೆಂಬರ್, ಅಕ್ಟೋಬರ್‌ನಲ್ಲಿ ಕಾಮನವೆಲ್ತ್ ದೇಶಗಳ ವಾಲಿಬಾಲ್ ಚಾಂಪಿಯನ್‌ಶಿಪ್ ಪಂದ್ಯಾವಳಿ




**ಬೆಳಗಾವಿ ವಾರ್ತೆ ಗದಗ:** ಕಳೆದ 18 ದಿನಗಳ ಕಾಲ ನಡೆದ ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಜನ್-2ರ ಕ್ರಿಕೆಟ್ ಪಂದ್ಯಾವಳಿ ಮನರಂಜನೆ ಮಾತ್ರವಲ್ಲ. ಕ್ರಿಕೆಟ್ ಆಟದಲ್ಲಿ ಗದುಗಿನ ಆಟಗಾರರು ಯಾವ ರೀತಿ ನೈಪುಣ್ಯತೆ ಹೊಂದಿದ್ದಾರೆಂದು ತೋರಿಸಿ ದ್ದೀರಿ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಜನ್-2ರ ಚಾಂಪಿಯನ್ ಎಲೈಟ್ ಇಲೆವೆನ್ ತಂಡಕ್ಕೆ ಟ್ರೋಫಿ ವಿತರಿಸಿ ಮಾತನಾಡಿದ ಅವರು, ಒಂದೆಡೆ ಐಪಿಎಲ್ ಪಂದ್ಯಾವಳಿ ಅಬ್ಬರದಿಂದ ನಡೆಯುತ್ತಿದ್ದರೆ, ಗದುಗಿನಲ್ಲಿ ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಪಂದ್ಯಾವಳಿ ನಡೆಯುತ್ತಿದ್ದರೂ ಗದುಗಿನ ಆಟಗಾರರು ಯಾವುದಕ್ಕೂ ಕಡಿಮೆ ಏನಿಲ್ಲ ಎನಿಸುತ್ತಿತ್ತು ಎಂದು ಹೇಳಿದರು.

ಪಂದ್ಯಾವಳಿಯಲ್ಲಿ ಗದುಗಿನ ಆಟಗಾರರು ಬಹಳ ಉತ್ತಮ ದರ್ಜೆಯ ಆಟವನ್ನು ಪ್ರದರ್ಶನ ಮಾಡಿದ್ದು, ಖ್ಯಾತ ಕ್ರಿಕೆಟಿಗ ಸುನಿಲ್ ಜೋಶಿ ಅವರು ಕೂಡ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ ಎಂದು ಹೇಳಿದರು.

ಈಗಾಗಲೇ 2030ರ ವೇಳೆಗೆ ಗದುಗಿನಲ್ಲಿ ರಣಜಿ ಪಂದ್ಯ ನಡೆಯಬೇಕು ಎನ್ನುವ ಸಂಕಲ್ಪ ಮಾಡಿದ್ದು, ಅದನ್ನು ಮತ್ತಷ್ಟು ಕಾರ್ಯಗತಗೊಳಿಸಲಾಗುವುದು ಎಂದು ಭರವಸೆ ನೀಡಿದರು.

ಗದಗ ಜಿಲ್ಲೆಯು ಕ್ರೀಡಾ ನಗರವಾಗಲು ಸ್ವಲ್ಪ ಹತ್ತಿರದಲ್ಲಿದ್ದು, ಮುಂದಿನ ದಿನಗಳಲ್ಲಿ ಕ್ರೀಡಾನಗರವನ್ನಾಗಿಸೋಣ. ಸೂಕ್ತ ತರಬೇತಿಗಾಗಿ ಸಿದ್ಧತೆ ಮಾಡಿಕೊಳ್ಳೋಣ ಎಂದರು. ಮುಂದಿನ ಸೆಪ್ಟೆಂಬರ್, ಅಕ್ಟೋಬರ್ ನಲ್ಲಿ ಕಾಮನವೆಲ್ತ್ ದೇಶಗಳ ವಾಲಿಬಾಲ್ ಚಾಂಪಿಯನ್‌ಶಿಪ್ ನಡೆಸಲು ರಾಷ್ಟ್ರೀಯ ವಾಲಿಬಾಲ್ ಸಂಸ್ಥೆ ಇಚ್ಛಿಸಿದ್ದು, ನಿಮ್ಮೆಲ್ಲರ ಇಚ್ಛಾಶಕ್ತಿಯಿಂದ ನಡೆಯುವಂತಾಗಲಿ ಎಂದು ಹಾರೈಸಿದರು.

ರಾಜ್ಯ ವಿಕೇಂದ್ರಿಕಾರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ. ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಜಿ, ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್‌ನ ಸಂಘಟಕರಾದ ಕೃಷ್ಣಗೌಡ ಎಚ್. ಪಾಟೀಲ, ಸಚಿನ್ ಪಾಟೀಲ, ಸರ್ಫರಾಜ್ ಶೇಖ್, ಜಿಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ಮಿಥುನ್ ಪಾಟೀಲ, ಅಕ್ಷಯ ಪಾಟೀಲ, ಅಶೋಕ ಮಂದಾಲಿ ಸೇರಿ 20 ತಂಡಗಳ ಮಾಲೀಕರು, ಕ್ರಿಕೆಟ್ ಅಭಿಮಾನಿಗಳು ಪಾಲ್ಗೊಂಡಿದ್ದರು.



**ಬೆಳಗಾವಿ ವಾರ್ತೆ ಗದಗ:** ನಗರದ ಒಕ್ಕಲಗೇರಿ ಕಮತರ್ ಪ್ಲಾಟ್ ವಾರ್ಡ ನಂ. 21 ರಲ್ಲಿ ಅಂಗನವಾಡಿ ಕೇಂದ್ರ ಉದ್ಘಾಟನೆಗೆ ಟೇಪ್ ಕತ್ತರಿಸುವ ಮೂಲಕ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲಚಾಲನೆ ನೀಡಿ ಮಕ್ಕಳೊಂದಿಗೆ ಕೇಕ್ ಕತ್ತರಿಸಿ ಸಚಿವರು ಸಂಭ್ರಮಾಚರಿಸಿದರು.

ಈ ಸಂದರ್ಭದಲ್ಲಿ ಅಕ್ಬರಸಾಬ್ ಬಬರ್ಜಿ, ಬಿ.ಬಿ. ಅಸೂಟಿ, ಅಶೋಕ ಮಂದಾಲಿ ಉಪಸ್ಥಿತರಿದ್ದರು.

# ಗದಗದಲ್ಲಿ ಭಗವಾನ ಬುದ್ಧ ಜಯಂತಿ ಕಾರ್ಯಕ್ರಮ ಅದ್ದೂರಿ ಆಚರಣೆ

## ಬುದ್ಧನ ಶಾಂತಿ ಮಂತ್ರ ಇಂದಿನ ಜಗತ್ತಿಗೆ ಅನಿವಾರ್ಯ: ಸಚಿವ ಎಚ್. ಕೆ. ಪಾಟೀಲ

**ಬೆಳಗಾವಿ ವಾರ್ತೆ ಗದಗ:** ಜಗತ್ತಿನಾದ್ಯಂತ ಯುದ್ಧದ ಕಾರ್ಮೋಡಗಳು ಕವಿದಿರುವ ಇಂದಿನ ಅಕ್ಷರಶಃ ವಿಷಮ ಪರಿಸ್ಥಿತಿಯಲ್ಲಿ ಭಗವಾನ್ ಬುದ್ಧನ ಶಾಂತಿ ಮತ್ತು ಸಹಬಾಳ್ವೆಯ ಸಂದೇಶಗಳು ಹಿಂದೆಂದಿಗಿಂತಲೂ ಹೆಚ್ಚು ಪ್ರಸ್ತುತವಾಗಿವೆ ಬುದ್ಧನ ಶಾಂತಿ ಮಂತ್ರ ಇಂದಿನ ಜಗತ್ತಿಗೆ ಅನಿವಾರ್ಯ ಎಂದು ರಾಜ್ಯದ ಕಾನೂನು ನ್ಯಾಯ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಪ್ರವಾಸೋದ್ಯಮ ಇಲಾಖೆಯ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ಹೇಳಿದರು.

ನಗರದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾಡಳಿತ ಭವನದ ಅಡಿಟೋರಿಯಂ ಸಭಾಂಗಣದಲ್ಲಿ ಶುಕ್ರವಾರ (ಮೇ 01 ರಂದು) ಆಯೋಜಿಸಲಾಗಿದ್ದ ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಬುದ್ಧನ ತತ್ವಗಳು ಕೇವಲ ಒಂದು ಧರ್ಮ ಅಥವಾ ಪ್ರದೇಶಕ್ಕೆ ಸೀಮಿತವಾಗಿಲ್ಲ, ಅವು ಇಡೀ ಜಗತ್ತಿನ ಆಸ್ತಿ ಎಂದು ಬಣ್ಣಿಸಿದರು ಅಮೆರಿಕಕ್ಕೆ ಕೋಟ್ಯಂತರ ಡಾಲರ್ ನಷ್ಟ ಇಂದಿನ ಜಾಗತಿಕ ರಾಜಕೀಯ ವಿದ್ಯಮಾನಗಳ ಕುರಿತು ರಷ್ಯಾ-ಉಕ್ರೇನ್ ಹಾಗೂ ಇಸ್ರೇಲ್-ಇರಾನ್ ನಡುವಿನ ಯುದ್ಧಗಳಿಂದಾಗಿ ಜಗತ್ತು ಭಾರಿ ಬೆಲೆ ತರುತ್ತಿದೆ, ಕೇವಲ ಯುದ್ಧದ ಕಾರಣದಿಂದಾಗಿ ಅಮೆರಿಕದಂತಹ ದೊಡ್ಡ ರಾಷ್ಟ್ರವು ಸುಮಾರು 40 ಲಕ್ಷ ಕೋಟಿ ಡಾಲರ್‌ನಷ್ಟು ಆರ್ಥಿಕ ನಷ್ಟ ಅನುಭವಿಸಿದೆ ಎಂದರೆ ಪರಿಸ್ಥಿತಿಯ ಗಂಭೀರತೆಯನ್ನು ಅರ್ಥ ಮಾಡಿಕೊಳ್ಳಬಹುದು. ಒಂದೆಡೆ ಕೋಟ್ಯಂತರ ರೂಪಾಯಿ ಮೌಲ್ಯದ ವಿಮಾನಗಳನ್ನು, ಮತ್ತೊಂದೆಡೆ ಅಲ್ಪ ಮೊತ್ತದ ಡ್ರೋನ್‌ಗಳು ಹೊಡೆದುರುಳಿಸುತ್ತಿವೆ. ಈ ಸಾವು-ನೋವು ಮತ್ತು ವಿನಾಶದ ಹಾದಿಯು ಮನುಕುಲಕ್ಕೆ ಮಾರಕವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಬುದ್ಧ ಶಾಂತಿಯ ಸಂಕೇತ: ಬುದ್ಧ ಎಂದರೆ ಕಣ್ಣು ಮುಚ್ಚಿ ಕುಳಿತ ಶಾಂತಿ ಮೂರ್ತಿ ಮಾತ್ರವಲ್ಲ, ಆತ ಜಗತ್ತಿಗೆ ಏಕಾಗ್ರತೆ ಮತ್ತು ಸಮಾನತೆಯ ಪಾಠ ಕಲಿಸಿದ ಮಹಾಗುರು. ಸಮಾಜದಲ್ಲಿ ಗಂಡು-ಹೆಣ್ಣು, ಶ್ರೀಮಂತ-ಬಡವ ಎಂಬ ಭೇದವಿಲ್ಲದೆ ಎಲ್ಲರೂ ಒಂದೇ ಎಂಬ ಸಮಸಮಾಜದ ಕನಸನ್ನು ಬುದ್ಧ ಅಂದೇ ಕಂಡಿದ್ದರು. ಇಂದಿನ ರಾಜಕೀಯ ನಾಯಕರು ಒಬ್ಬರನ್ನೊಬ್ಬರು ಕೊಲ್ಲುವ, ದ್ವೇಷಿಸುವ ಪ್ರವೃತ್ತಿ ಬೆಳೆಸಿಕೊಂಡಿದ್ದಾರೆ. ಆದರೆ, ಭಾರತವು ವಿವಿಧ ಜಾತಿ, ಧರ್ಮ ಮತ್ತು ಪಂಥಗಳ ನಡುವೆಯೂ ಬುದ್ಧನ ಶಾಂತಿ ಮಂತ್ರದ ಅಡಿಯಲ್ಲಿ ಒಗ್ಗಟ್ಟಿನಿಂದ ಸಾಗುತ್ತಿದೆ ಎಂದು ಹೆಮ್ಮೆಯಿಂದ ನುಡಿದರು.

ಗದಗ ನಗರದಲ್ಲಿ ಬೌದ್ಧ ಸಂಸ್ಕೃತಿ ಮತ್ತು ವಿಚಾರಧಾರೆಗಳನ್ನು ಪಸರಿಸುವ ನಿಟ್ಟಿನಲ್ಲಿ 10 ಕೋಟಿ ರೂಪಾಯಿಗಳ ಭವ್ಯ, ಬುದ್ಧ ವಿಹಾರ ನಿರ್ಮಾಣಕ್ಕೆ ಸರ್ಕಾರ ಅನುಮೋದನೆ ನೀಡಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್. ಕೆ. ಪಾಟೀಲ ಅವರು ಪ್ರಕಟಿಸಿದರು. ಬುದ್ಧ ವಿಹಾರದ ನಿರ್ಮಾಣಕ್ಕಾಗಿ ಈಗಾಗಲೇ 10 ಕೋಟಿ ರೂಪಾಯಿಗಳ ಅನುದಾನ ಮಂಜೂರಾಗಿದ್ದು, ಆ ಪೈಕಿ 3 ಕೋಟಿ ರೂಪಾಯಿಗಳು ಈಗಾಗಲೇ ಬಿಡುಗಡೆಯಾಗಿ ಜಿಲ್ಲಾಧಿಕಾರಿಗಳ ವ್ಯಾಪ್ತಿಗೆ ತಲುಪಿವೆ. ನಗರದ ಮೆಡಿಕಲ್ ಕಾಲೇಜು ಸಮೀಪವಿರುವ ಗುಡ್ಡದ ಮೇಲಿನ ಆಯಕಟ್ಟಿನ ಜಾಗದಲ್ಲಿ ಈ ವಿಹಾರ ತಲೆ ಎತ್ತಲಿದೆ. ಇದಕ್ಕೆ ಸಂಬಂಧಿಸಿದ ನಕ್ಷೆ ಮತ್ತು ಯೋಜನಾ ವರದಿ ಸಿದ್ಧವಾಗಿದ್ದು, ಮುಂದಿ ನ ಒಂದು ತಿಂಗಳ ಒಳಗಾಗಿ ಕಾಮಗಾರಿ ಆರಂಭವಾಗಲಿದೆ ಎಂದು ಸಚಿವರು ತಿಳಿಸಿದರು.

ಇಂದಿನ ಜಗತ್ತಿಗೆ ಬುದ್ಧನ ಶಾಂತಿ ಮಂತ್ರ ಅತಿ ಅವಶ್ಯಕವಾಗಿದೆ. ಪತ್ರಿಕೆಯೊಂದರಲ್ಲಿ ಪ್ರಕಟವಾದ ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಬಂದೂಕು ಹಿಡಿದು ಫೋಟೋ ತೆಗೆಸಿಕೊಂಡಿದ್ದನ್ನು ಉಲ್ಲೇಖಿಸಿದ ಸಚಿವರು, "ಟ್ರಂಪ್ ಅವರೇ, ಇಂದು ಜಗತ್ತಿಗೆ ನಿಮ್ಮ ಬಂದೂಕು ಬೇಕಾಗಿಲ್ಲ, ಬುದ್ಧನ ಶಾಂತಿ ಮಂತ್ರ ಬೇಕಾಗಿದೆ" ಎಂದು ಮಾರ್ಮಿಕವಾಗಿ ನುಡಿದರು.

ಜಗತ್ತಿನಾದ್ಯಂತ ಸಕಾರಾತ್ಮಕ ಮತ್ತು ರಚನಾತ್ಮಕ ಬದಲಾವಣೆಗೆ ಬುದ್ಧನ ತತ್ವಗಳೇ ದಾರಿದೀಪ ಎಂದರು.

ನಮ್ಮ ದೇಶದ ಸಂವಿಧಾನವು ಬುದ್ಧನ ಬುದ್ಧಂ ಧಮ್ಮಂ ಸಾರವನ್ನು ಒಳಗೊಂಡಿದೆ. ಬಾಬಾಸಾಹೇಬ್ ಅಂಬೇಡ್ಕರ್ ಅವರು ಬುದ್ಧನ ಸಮ ಸಮಾಜ, ಶೋಷಣೆ ಮುಕ್ತ ಸಮಾಜ ಮತ್ತು ಸಮಾನತೆಯ ತತ್ವಗಳಿಂದ ಪ್ರೇರಿತರಾಗಿ ಸಂವಿಧಾನವನ್ನು ರೂಪಿಸಿದ್ದಾರೆ. ಇದರಲ್ಲಿ ಬಸವಣ್ಣ ಮತ್ತು ಗಾಂಧೀಜಿಯವರ ವಿಚಾರಧಾರೆಗಳೂ ಸಮ್ಮಿಳಿತವಾಗಿವೆ ಎಂದು ಅವರು ವಿವರಿಸಿದರು.



ಬುದ್ಧನ ಸಾಹಿತ್ಯ ಓದಲು ವಿದ್ಯಾರ್ಥಿಗಳಿಗೆ ತಿಳಿ ಹೇಳಿ ಕನ್ನಡ ಸಾಹಿತ್ಯದಲ್ಲಿ ವಚನ ಮತ್ತು ದಾಸ ಸಾಹಿತ್ಯದಷ್ಟೇ ಮಹತ್ವ ಬುದ್ಧನ ಪ್ರೇರಣೆಯಿಂದ ಸೃಷ್ಟಿಯಾದ ಸಾಹಿತ್ಯಕ್ಕೂ ಇದೆ. "ನಾವು ದಶಕಗಳಿಂದ ಬುದ್ಧನ ಹೆಸರನ್ನು ಹೇಳುತ್ತಿದ್ದೇವೆ, ಆದರೆ ಆತನ ಸಾಹಿತ್ಯವನ್ನು ಆಳವಾಗಿ ಓದಿಲ್ಲ. ಕೇವಲ 'ಬುದ್ಧಂ ಶರಣಂ ಗಚ್ಛಾಮಿ' ಎನ್ನುವುದಕ್ಕೆ ಸೀಮಿತವಾಗದೆ, ಬುದ್ಧನ ಮಾರ್ಗದರ್ಶನ ಮತ್ತು ವಿಚಾರಗಳನ್ನು ಓದಿ ಜೀವನದಲ್ಲಿ ಅಳವಡಿಸಿಕೊಳ್ಳಬೇಕು" ಎಂದು ಸಚಿವರು ಯುವಜನತೆಗೆ ಕರೆ ನೀಡಿದರು.

ಬುದ್ಧನ ಮೂರು ಮಂತ್ರಗಳು ಸಚಿವರಾದ ಎಚ್. ಕೆ. ಪಾಟೀಲ ಅವರು ಉಲ್ಲೇಖಿಸಿದಂತೆ ಬುದ್ಧನು ಜಗತ್ತಿಗೆ ಶಾಂತಿ, ಅಹಿಂಸೆ ಮತ್ತು ಮಾನವೀಯತೆ ಎಂಬ ಮೂರು ಮಹಾನ್ ಮಂತ್ರಗಳನ್ನು ನೀಡಿದ್ದಾನೆ. ಯಾವುದೇ ದೇಶ ಅಥವಾ ರಾಜ್ಯ ಪ್ರಗತಿ ಹೊಂದಬೇಕಾದರೆ ಅಲ್ಲಿ ಶಾಂತಿ ಇರುವುದು ಅತಿ ಮುಖ್ಯ. ವ್ಯಕ್ತಿಯೊಬ್ಬನಿಗೆ ಎಷ್ಟೇ ಅಧಿಕಾರ ಮತ್ತು ಅಂತಸ್ತು ಇದ್ದರೂ, ಆತನಿಗೆ ಮಾನಸಿಕ ಶಾಂತಿ ಇಲ್ಲದಿದ್ದರೆ ಅದು ಬದುಕೇ ಅಲ್ಲ ಎಂದು ಅವರು ಅಭಿಪ್ರಾಯಪಟ್ಟರು. ಅಹಿಂಸೆ ಮತ್ತು ಪ್ರೀತಿಯ ಮೂಲಕ ಎಲ್ಲರನ್ನೂ ಸಮಾನವಾಗಿ ಕಾಣುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಅವರು ತಿಳಿಸಿದರು.

ಬಸವಣ್ಣ ಮತ್ತು ಬುದ್ಧನ ವಿಚಾರಧಾರೆಗಳು ಹನ್ನೆರಡನೇ ಶತಮಾನದಲ್ಲಿ ಬಸವಣ್ಣನವರು ಸಮಾನತೆಯ ಸಮಾಜಕ್ಕಾಗಿ ಹೋರಾಡಿದ್ದನ್ನು ಸ್ಮರಿಸಿದ ಸಂಕನೂರು ಅವರು, ಅದಕ್ಕೂ ಮುನ್ನ ಎಂಟನೇ ಶತಮಾನದಲ್ಲೇ ಬುದ್ಧನು ಜಾತಿ ಪದ್ಧತಿಯ ವಿರುದ್ಧ ಮತ್ತು ಮೇಲು-ಕೀಳು ಎಂಬ ಭೇದಭಾವದ ವಿರುದ್ಧ ಧ್ವನಿ ಎತ್ತಿದ್ದನ್ನು ನೆನಪಿಸಿಕೊಂಡರು. ಹಿಂದೂ ಧರ್ಮದಲ್ಲಿ ನಂಬಲಾದ 'ಕರ್ಮ ಸಿದ್ಧಾಂತ'ದ ಬಗ್ಗೆಯೂ ಬುದ್ಧನು ಅಂದೇ ಸಂದೇಶ ನೀಡಿದ್ದ ಎಂದು ಅವರು ವಿವರಿಸಿದರು.

ಜೀವನದ ಸತ್ಯ ಮತ್ತು ಸನ್ಮಾರ್ಗ ಜೀವನದಲ್ಲಿ ಸಾವು, ಮುಪ್ಪು ಮತ್ತು ರೋಗಗಳು ಅನಿವಾರ್ಯವಾಗಿದ್ದು, ಇವುಗಳ ನಡುವೆಯೂ ಮನುಷ್ಯನು ಕೆಟ್ಟ ಮಾರ್ಗವನ್ನು ಬಿಟ್ಟು ಧರ್ಮದ ಹಾದಿಯಲ್ಲಿ ನಡೆಯಬೇಕು ಎಂದು ಸಂಕನೂರು ಹೇಳಿದರು ಇಂದಿನ ದಿನಗಳಲ್ಲಿ ಸಮಾಜಕ್ಕೆ ಬುದ್ಧನ ವೈಚಾರಿಕತೆ ಬಹಳ ಅವಶ್ಯಕವಾಗಿದೆ ಎಂದು ಅವರು ಒತ್ತಿ ಹೇಳಿದರು.

ಭವ್ಯ ಬುದ್ಧ ವಿಹಾರಕ್ಕೆ ಅಭಿನಂದನೆ ಸಲ್ಲಿಸಿ ಇದೇ ಸಂದರ್ಭದಲ್ಲಿ ಗದಗ ನಗರದಲ್ಲಿ 10 ಕೋಟಿ ರೂಪಾಯಿ ವೆಚ್ಚದಲ್ಲಿ ಭವ್ಯವಾದ ಬುದ್ಧ ವಿಹಾರ ನಿರ್ಮಾಣಕ್ಕೆ ಮುಂದಾಗಿರುವ ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ಅವರ ಕಾರ್ಯವನ್ನು ಮುಕ್ತಕಂಠದಿಂದ ಶ್ಲಾಘಿಸಿದರು. ಈ ವಿಹಾರವು ಬೌದ್ಧ ಧರ್ಮದ ತತ್ವಗಳನ್ನು ಪ್ರಚಾರ ಮಾಡಲು ಮತ್ತು ಅಧ್ಯಯನ ಮಾಡಲು ಪೂರಕವಾಗಲಿದೆ ಎಂದು ಅವರು ಹರ್ಷ ವ್ಯಕ್ತಪಡಿಸಿದರು.

ನಿವೃತ್ತ ಉಪನ್ಯಾಸಕರಾದ ಸತೀಶ ಪಾಶಿ ಮಾತನಾಡಿ ಬುದ್ಧ ಎಂದರೆ ಕೇವಲ ಒಬ್ಬ ವ್ಯಕ್ತಿಯಲ್ಲ, ಆತ ಇಡೀ ಜಗತ್ತನ್ನೇ ಗೆದ್ದ ಮಹಾನ್ ಶಕ್ತಿ. ಇತಿಹಾಸದಲ್ಲಿ ಬುದ್ಧನ ತ್ಯಾಗ ಮತ್ತು ಸತ್ಯದ ಹುಡುಕಾಟದ ಹಾದಿ ಇಂದಿಗೂ ಪ್ರಸ್ತುತ ಎಂದು ಯುವ ಚಿಂತಕ ಸತೀಶ ಪಾಶಿ ಅವರು ಹೇಳಿದರು.

ಅರಮನೆಯ ಸುಖ ತೊರೆದ ಸಿದ್ಧಾರ್ಥನು ಅರಮನೆಯ ಐಷಾರಾಮಿ ಜೀವನವನ್ನು ಬಿಟ್ಟು ಹೊರಬರಲು ಕಾರಣವಾದ ಸಂದರ್ಭಗಳನ್ನು ವಿವರಿಸುತ್ತಾ, ಅವರು ಶುದ್ಧೋದನ ಮತ್ತು ಸಿದ್ಧಾರ್ಥನ ನಡುವಿನ ಸಂಭಾಷಣೆಯನ್ನು ಮೆಲುಕು ಹಾಕಿದರು.

ತನಗೆ ಸಾವು ಬರಬಾರದು, ರೋಗ-ರುಜಿನಗಳು ತಗುಲಬಾರದು ಮತ್ತು ವಯಸ್ಸಾಗಿ ಮುಪ್ಪು ಆವರಿಸಬಾರದು ಎಂಬ ಮೂರು ನಿಬಂಧನೆಗಳನ್ನು ಸಿದ್ಧಾರ್ಥ ತನ್ನ ತಂದೆಯ ಮುಂದೆ ಇಡುತ್ತಾನೆ. ಈ ಅಗೋಚರ ಪ್ರಶ್ನೆಗಳಿಗೆ ಉತ್ತರವಿಲ್ಲದೆ ಶುದ್ಧೋದನ ಮೌನಕ್ಕೆ ಶರಣಾದಾಗ, ಸಿದ್ಧಾರ್ಥನು 29ನೇ ವಯಸ್ಸಿನಲ್ಲಿ ಅರಮನೆಯನ್ನು ತೊರೆದನು.

ಜಗತ್ತನ್ನೇ ಗೆದ್ದ ಬುದ್ಧ ಲೋಕದ ಅನೇಕ ಬರಹಗಾರರು ಬುದ್ಧನನ್ನು 'ಬುದ್ಧ, ಇದ್ದ, ಗೆದ್ದ' ಎಂಬ ಪದಗಳಿಂದ ವಿವರಿಸಿರಬಹುದು. ಆದರೆ, ಬುದ್ಧನು ಇಡೀ ಜಗತ್ತನ್ನೇ ಗೆದ್ದವನು. ಯಾವುದೇ ಧನ-ಧಾನ್ಯ, ಆನೆ-ಕುದುರೆ ಅಥವಾ ರಥಗಳ ಸೈನ್ಯವಿಲ್ಲದೆ, ಕೇವಲ ಶಾಂತಿ ಮತ್ತು ಸತ್ಯದ ಮೂಲಕ ಜಗತ್ತನ್ನು ಗೆದ್ದ ಏಕೈಕ ವ್ಯಕ್ತಿ ಬುದ್ಧ. ಕುವೆಂಪು ದರ್ಶನದಲ್ಲಿ ದಶರಥ ಮತ್ತು ಬುದ್ಧನ ಹೋಲಿಕೆ

ತಮ್ಮ ಭಾಷಣದಲ್ಲಿ ಕುವೆಂಪು ಅವರ 'ರಾಮಾಯಣ ದರ್ಶನಂ' ಕೃತಿಯನ್ನು ಉಲ್ಲೇಖಿಸಿದ ಅವರು, ದಶರಥ ಮಹಾರಾಜನ ಶೌರ್ಯ ಮತ್ತು ಅವನ ಅಂತ್ಯವನ್ನು ಸಿದ್ಧಾರ್ಥನ ನಿರ್ಧಾರಕ್ಕೆ ಹೋಲಿಸಿ ವಿಶ್ಲೇಷಿಸಿದರು. ಕೈಕೆಯ ಮಾತುಗಳಿಗೆ ಒಳಗಾದ ದಶರಥನ ಶೌರ್ಯ ಹೇಗೆ ನಾಶವಾಯಿತೋ, ಹಾಗೆಯೇ ತಮ್ಮ ಇಂದ್ರಿಯಗಳ ಮೇಲೆ ಹತೋಟಿ ಸಾಧಿಸಲು ಸಿದ್ಧಾರ್ಥನು ಮಧ್ಯರಾತ್ರಿಯಲ್ಲಿ ಯಾರಿಗೂ ತಿಳಿಯದಂತೆ ಮನೆಯಿಂದ ಹೊರಬಂದನು. ಸಿದ್ಧಾರ್ಥನು ತನ್ನ ಅರಮನೆಯನ್ನು ಬಿಟ್ಟು ಸರಿಹೂ ನದಿಯ (ಈಗಿನ ಗೋದಾವರಿ) ದಂಡೆಯ ಮೂಲಕ ಅರಣ್ಯವನ್ನು ಪ್ರವೇಶಿಸಿದ ಕ್ಷಣವನ್ನು ಪಾಶಿ ಅವರು ಭಾವುಕವಾಗಿ ವಿವರಿಸಿದರು. ಸಿದ್ಧಾರ್ಥನು ತನ್ನ ಪ್ರೀತಿಯ ಕುದುರೆ 'ಕಂತಕ' ಮತ್ತು ಸೇವಕ 'ಚನ್ನ'ನ ಸಹಾಯದೊಂದಿಗೆ ಸತ್ಯದ ಹುಡುಕಾಟಕ್ಕೆ ಹೊರಟನು. ಬುದ್ಧನ ಜೀವನದ ಅಂತಿಮ ಹಂತದಲ್ಲಿ ಗಿರಿಜನರ ಹೆಣ್ಣುಮಗಳು ನೀಡಿದ ಪಾಯಸವನ್ನು ಸ್ವೀಕರಿಸಿ, "ಮತ್ತೆ ನಾನು ಮನುಷ್ಯನಾಗಿ ಪರಿನಿಬ್ಬಾಣ ಹೊಂದುತ್ತಿದ್ದೇನೆ" ಎಂದು ತನ್ನ ಶಿಷ್ಯರಿಗೆ ತಿಳಿಸಿ ಕಣ್ಣಿನಿಂದ ಮರೆಯಾದರು ಎಂದು ಅವರು ನೆನಪಿಸಿಕೊಂಡರು. ಬಾಬಾಸಾಹೇಬ್ ಅಂಬೇಡ್ಕರ್ ಅವರು ಬುದ್ಧನನ್ನು ಅನುಸರಿಸಲು ಕೇವಲ ಭಕ್ತಿ ಕಾರಣವಲ್ಲ, ಬದಲಾಗಿ ಬುದ್ಧನಲ್ಲಿದ್ದ ಸತ್ಯ ಮತ್ತು ವೈಚಾರಿಕತೆಯೇ ಮುಖ್ಯ ಕಾರಣವಾಗಿತ್ತು ಎಂದು ಸತೀಶ ಪಾಶಿ ಅವರು ಒತ್ತಿ ಹೇಳಿದರು.

ಜೇನುಗೂಡು ಕಲಾತಂಡದ ಬಸವರಾಜ ಅಂಗಡಿ ಮತ್ತು ಸಂಗಡಿಗರಿಂದ ಭಗವಾನ ಬುದ್ಧರ ಗಾಯನ ಪ್ರಸ್ತುತ ಪಡಿಸಿದರು. ಬಸವರಾಜ ಅಂಗಡಿ ಮತ್ತು ಸಂಗಡಿಗರು ನಾಡಗೀತೆ ಪ್ರಸ್ತುತ ಪಡಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಸವರಾಜ ಬಳ್ಳಾರಿ ಸರ್ವರನ್ನು ಸ್ವಾಗತಿಸಿದರು ಪ್ರೊ. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ಹಾಗೂ ಡಾ.ಎಸ್. ವಿ. ಸಂಕನೂರು, ಅಮೃತ ಹಸ್ತದಿಂದ ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಬಿ.ಇ.ಡಿ ಕಾಲೇಜುಗಳಲ್ಲಿ ಏರ್ಪಡಿಸಿದ್ದ ಭಗವಾನ ಬುದ್ಧರ ಕುರಿತು ಪ್ರಬಂಧ ಸ್ಪರ್ದೆಯಲ್ಲಿ ವಿಜೇತರಾದ ವಿದ್ಯರ್ಥಿಗಳಿಗೆ, ಎಸ್ ಎಸ್ ಎಲ್ ಸಿ ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಮುದಾಯದ ಸಾಧಕರಿಗೆ ಗೌರವಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರು ಡಿ. ಆರ್. ಪಾಟೀಲ,ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಜಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ ಅಸೂಟಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಅಪರ ಜಿಲ್ಲಾಧಿಕಾರಿ ಡಾ.ದುರಗೇಶ.ಕೆ.ಆರ್., ಉಪವಿಭಾಗಧಿಕಾರಿ ಗಂಗಪ್ಪ ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ ಜಗದೀಶ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ. ಆರ್. ಮುಂಡರಗಿ,ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ಡಾ. ನಂದಾ ಹಣಬರಟ್ಟಿ, ಸಫಾಯಿ ಕರ್ಮಚಾರಿ ಸಂಘದ ಸದಸ್ಯ ಎಸ್.ಎನ್ ಬಳ್ಳಾರಿ, ಸೇರಿದಂತೆ ಸಮಾಜದ ಗಣ್ಯರು, ಮುಖಂಡರುಗಳು, ಎಲ್ಲಾ ಇಲಾಖೆಯ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ಮೀಸಲಾತಿ ಪಡೆದುಕೊಳ್ಳುವ ಶಕ್ತಿ ನಾರಿಯರಿಗಿದೆ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಪ್ರಧಾನಿ ನರೇಂದ್ರ ಮೋದಿಯವರಿಂದ ಮಾತ್ರ ಮಹಿಳೆಯರಿಗೆ ಶೇ 33ರಷ್ಟು ಮೀಸಲಾತಿ ಕೊಡಲು ಸಾಧ್ಯ, ಬೇರೆ ಯಾರಿಂದಲೂ ಸಾಧ್ಯವಿಲ್ಲ. ಮಹಿಳೆಯರು ಹತಾಶರಾಗುವ ಅವಶ್ಯಕತೆ ಇಲ್ಲ. ಮೀಸಲಾತಿ ಪಡೆದುಕೊಳ್ಳುವ ಶಕ್ತಿ ನಿಮಗಿದೆ. ಪ್ರಜಾಪಭುತ್ವದಲ್ಲಿ ಜನರ ಆಶೋತ್ತರಗಳೇ ಯಶಸ್ವಿ ಆಗುವುದು. ಮಹಿಳಾ ಮೀಸಲಾತಿಯೂ ಅದೇ ರೀತಿ ಯಶಸ್ವಿಯಾಗುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ವಿಶ್ವಾಸ ವ್ಯಕ್ತಪಡಿಸಿದರು.

ಹುಬ್ಬಳ್ಳಿಯ ನೆಹರು ಮೈದಾನದಲ್ಲಿ ನಾರಿ ಶಕ್ತಿ ವಂದನಾ ಅಧಿನಿಯಮವನ್ನು (ಮಹಿಳಾ ಮೀಸಲಾತಿ ಮಸೂದೆ) ಜಾರಿಯಾಗದಂತೆ ತಡೆದ ಮಹಿಳಾ ವಿರೋಧಿ ಕಾಂಗ್ರೆಸ್ ಮತ್ತು ಮಿತ್ರ ಪಕ್ಷಗಳ ವಿರುದ್ಧ ಭಾರತೀಯ ಜನತಾ ಪಾರ್ಟಿಯ ವತಿಯಿಂದ ಏರ್ಪಡಿಸಿದ ಜನಾಕ್ರೋಶ ಪಾದಯಾತ್ರೆ ಹಾಗೂ ಪ್ರತಿಭಟನಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ಇಡಿ ವಿಶ್ವದಲ್ಲಿ ಮನುಷ್ಯನಿಗೆ ಶಕ್ತಿ ತುಂಬುವ ಕೆಲಸ ಮನುಷ್ಯನ ಜನ್ಮದಿಂದ ಹಿಡಿದು ಎಲ್ಲ ವಿಷಯದಲ್ಲಿ ನಾನು ಹಿಂದೆ ಇಲ್ಲ ಸರಿಸಮಾನ ಎಂದು ತೋರಿಸುವ ಕೆಲಸವನ್ನು ಮಹಿಳೆ ಮಾಡಿದ್ದಾಳೆ. ಕರ್ನಾಟಕದ ಇತಿಹಾಸದಲ್ಲಿ ವೀರ ರಾಣಿ ಕಿತ್ತೂರು ಚನ್ನಮ್ಮ ನಾರಿಶಕ್ತಿಯ ಪ್ರತೀಕ. ರಾಣಿ ಅಬ್ಬಕ್ಕ, ಒಣಕೆ ಓಬವ್ವ, ಹಲವಾರು ಹೆಸರುಗಳಿವೆ. ಆಧ್ಯಾತ್ಮದಲ್ಲಿ ಯಾರಿಗೂ ಕಡಿಮೆ ಇಲ್ಲದ ಅಕ್ಕ ಮಹಾದೇವಿ, ಕಾಂಗ್ರೆಸದ ನವರು ಯಾವ ಕಾಲದಲ್ಲಿ ಇದ್ದಾರೆ. ಆಧುನಿಕ ಕಾಲದಲ್ಲಿ ನರೇಂದ್ರ ಮೋದಿಯವರ ಕಾಲದಲ್ಲಿ ಧ್ವನಿ ಎತ್ತದಿದ್ದರೆ ಹೇಗೆ? ಕೇವಲ ನರೇಂದ್ರ ಮೋದಿಯವರಿಂದ ಮಾತ್ರ ಮಹಿಳೆಯರಿಗೆ ಮೀಸಲಾತಿ ಕೊಡಲು ಸಾಧ್ಯ. ಬೇರೆ ಯಾರಿಂದಲೂ ಸಾಧ್ಯವಿಲ್ಲ. 2023ರಲ್ಲಿ ನಮ್ಮದು ಮೂರನೇ ಎರಡಷ್ಟು ಬಹುಮತ ಇರದಿದ್ದರೂ ಎಲ್ಲ ಪಕ್ಷಗಳ ಬೆಂಬಲದಿಂದ ಈಗಾಗಲೇ ಶೇ 33 ರಷ್ಟು ಮೀಸಲಾತಿ ಕೊಡಲು ತೀರ್ಮಾನ ಮಾಡಿದ್ದಾರೆ. ಅದನ್ನು ಯಾವುದೇ ಸರ್ಕಾರ ಇದ್ದರೂ ಜಾರಿ ಮಾಡಲೇಬೇಕಾಗುತ್ತದೆ. ಅದನ್ನು 2034ಕ್ಕೆ ಮಾಡಲು ತೀರ್ಮಾನ ಮಾಡಿದ್ದರು. ಆದರೆ, ಮೋದಿಯವರು 2029ಕ್ಕೆ ಜಾರಿಗೆ ತರಲು ಪ್ರಯತ್ನ ಮಾಡಿದರು. ಆದರೆ, ಪ್ರತಿಪಕ್ಷಗಳು ಅದನ್ನು ಹತ್ಯೆ ಮಾಡಿದವು. ಪ್ರಧಾನಿ ನರೇಂದ್ರ ಮೋದಿಯವರು ಅದನ್ನು ಬ್ರೂಣ ಹತ್ಯೆ ಎಂದು ಕರೆದರು. ಕಾಂಗ್ರೆಸ್‌ನವರು ಮಹಿಳೆಯರ ರಾಜಕೀಯ ಶಕ್ತಿಗೆ ಬ್ರೂಣ ಹತ್ಯೆ ಮಾಡಿದ್ದಾರೆ. ನರೇಂದ್ರ ಮೋದಿಯವರು ಯಾವುದೇ ಕೆಲಸ ಕೈಗೆತ್ತಿಕೊಂಡರೆ ಅದನ್ನು ಮಾಡಿಯೇ ಮಾಡುತ್ತಾರೆ. ಮೋದಿಯವರು 2029ಕ್ಕೆ ಮಹಿಳಾ ಮೀಸಲಾತಿಯನ್ನು ಜಾರಿಗೆ ತಂದೆ ತರುತ್ತಾರೆ ಎನ್ನುವ ವಿಶ್ವಾಸ ಇದೆ. ಅದಕ್ಕೆ ಶಕ್ತಿ ತುಂಬಲು ನಾವು ಇದನ್ನು ಎಲ್ಲರ ಮನೆ ಮನೆಗೆ ತಲುಪಿಸಬೇಕು. ವಿರೋಧ ಮಾಡಿದವರನ್ನು ಕಟಕಟೆಯಲ್ಲಿ ನಿಲ್ಲಿಸಬೇಕಾಗುತ್ತದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಮಹಿಳೆಯರಿಗೆ ದೊಡ್ಡ ದ್ರೋಹ ಮಾಡಿದೆ ಎಂದು ಹೇಳಿದರು.

**ಮಹಿಳೆಯರಿಗೆ ರಕ್ಷಣೆ ಇಲ್ಲ:** ರಾಜ್ಯದಲ್ಲಿ ಕೊಲೆ ಸುಲಿಗೆ ಪ್ರತಿ ದಿನ ಲವ್ ಜಿಹಾದ್, ಮಹಿಳಾ ಹತ್ಯೆಗಳು ನಡೆಯುತ್ತಿವೆ. ನಮ್ಮ ಮಹಿಳೆಯರು ಮೈಸೂರು, ಮುಂಬೈಗೆ ಹೋಗುತ್ತಿದ್ದಾರೆ. ರಾಜ್ಯ ಸರ್ಕಾರ ಮಹಿಳೆಯರ ರಕ್ಷಣೆಗೆ ಏನೂ ಮಾಡುತ್ತಿಲ್ಲ. ನಮ್ಮ ಹೆಣ್ಣು ಮಕ್ಕಳು ಶಾಲೆಗೆ ಹೋದರೆ, ಕೆಲಸಕ್ಕೆ ಹೋದರೆ ಸಂಜೆ ಮನೆಗೆ ಬರುವ ಭರವಸೆ ಇಲ್ಲ. ರಾಜ್ಯದಲ್ಲಿ ಅನೀತಿ, ಅತ್ಯಾಚಾರ ನಿಲ್ಲಬೇಕಾದರೆ ನಮ್ಮ ರಕ್ಷಣೆ ಮಾಡಿಕೊಳ್ಳಲು ನಾವು ಸಿದ್ದರಿದ್ದೇವೆ. ನಮಗೆ ಅಧಿಕಾರ ಕೊಡಿ, ವಿಧಾನಸಭೆ, ಲೋಕಸಭೆಯಲ್ಲಿ ಸ್ಥಾನ ಕೊಡಿ ಎಂದು ನಾರಿ ಶಕ್ತಿ ಕೂಗಿ ಕೂಗಿ ಹೇಳುತ್ತಿದೆ ಎಂದು ಹೇಳಿದರು.

**ಕರ್ನಾಟಕದಲ್ಲಿ ಅಡಿಪಾಯ:** ಭೇಟಿ ಪಡಾವೊ ಬೇಟಿ ಬಚಾವೊ ಅದಕ್ಕೆ ಭಾರತದಲ್ಲಿ ಅಡಿಪಾಯ ಹಾಕಿದ್ದು ಮಾಜಿ ಮುಖ್ಯಮಂತಿ ಯಡಿಯೂರಪ್ಪ ಅವರು., ಭಾಗ್ಯ ಲಕ್ಷ್ಮಿ ಯೋಜನೆ ಜಾರಿಗೆ ತಂದು ಹೆಣ್ಣು ಮಗು ಹುಟ್ಟಿದಾಗ ಒಂದು ಲಕ್ಷ ರೂ. ಡಿಪಾಜಿಟ್ ಇಡಲಾಗಿತ್ತು. ಈಗ ಸುಮಾರು 40 ಲಕ್ಷ ಹೆಣ್ಣು ಮಕ್ಕಳು ಹದಿನೆಂಟು ವರ್ಷ ಪೂರೈಸಿದ್ದಾರೆ. ಅವರಿಗೆ ಒಂದು ಲಕ್ಷ ಸಿಗುತ್ತಿದೆ. ಅವರು ಶಾಲೆಗೆ ಹೋಗುತ್ತಿದ್ದಾರೆ. ಮಹಿಳೆಯರು ಶಾಲೆ ಬಿಡಬಾರದು ಎಂದು ಸೈಕಲ್ ಕೊಟ್ಟರು.

ನನ್ನ ಅವಧಿಯಲ್ಲಿ ಸ್ತ್ರೀ ಸಾಮರ್ಥ್ಯ ಯೋಜನೆ ಜಾರಿಗೆ ತಂದಿದ್ದೆ. ಹೆಣ್ಣು ಮಕ್ಕಳು ಸ್ವಯಂ ಉದ್ಯೋಗ ಮಾಡಬೇಕೆಂದು ತಂದಿದ್ದೆ. ನರೇಂದ್ರ ಮೋದಿಯವರು ಕೇಂದ್ರದಲ್ಲಿ ಸಂಜೀವಿನಿ ಎನ್ನುವ ಕಾರ್ಯಕ್ರಮ ಕರ್ನಾಟಕದಲ್ಲಿ 10 ಲಕ್ಷ ಮಹಿಳೆಯರಿಗೆ ಅನುಕೂಲವಾಗಿದೆ ಎಂದು ಹೇಳಿದರು.

**ಮಹಿಳೆಯ ಬಗ್ಗೆ ಗೌರವ:** ಮಹಿಳೆಯರ ಬಗ್ಗೆ ನಮ್ಮ ಧರ್ಮದಲ್ಲಿ ಗೌರವ ಇದೆ. ಮಹಿಳೆಯನ್ನು ದೇವಿಯ ಸ್ಥಾನದಲ್ಲಿ ನೋಡುತ್ತೇವೆ. ಅದೇ ಭಾವನೆ ಇತರ ಧರ್ಮದಲ್ಲಿ ಇರಬೇಕೆಂದು ತ್ರಿಬಲ್ ತಲಾಖ್ ಅನ್ನು ಮೋದಿಯವರು ತೆಗೆದು ಹಾಕಿದರು. ಅಲ್ಪ ಸಂಖ್ಯಾತರ ಮತ ಪಡೆಯುವ ಕಾಂಗ್ರೆಸ್‌ವರಿಗೆ ಈ ವಿಚಾರ ಬರಲಿಲ್ಲ. ಡಿಲಿಮಿಟೇಷನ್ ಆದರೆ ಕಾಗ್ರೆಸ್ ನವರು ದಕ್ಷಿಣದಲ್ಲಿ ಸೀಟು ಕಡಿಮೆಯಾಗುತ್ತವೆ ಎಂದು ಹೇಳುತ್ತಾರೆ. ಮೋದಿಯವರು ತಂದಿರುವ ಕಾಯ್ದೆಯಲ್ಲಿ ಎಲ್ಲ ರಾಜ್ಯದಲ್ಲಿ ಶೇ 50 ರಷ್ಟು ಸೀಟುಗಳು ಹೆಚ್ಚಳವಾಗುತ್ತವೆ. ಈಗ ಕಾಂಗ್ರೆಸ್‌ನವರು ಮಾಡುತ್ತಿರುವ ವಾದದಂತೆ ಮಾಡಿದರೆ ಕರ್ನಾಟಕ ಸೇರಿದಂತೆ ದಕ್ಷಿಣದ ಎಲ್ಲ ರಾಜ್ಯಗಳಲ್ಲಿ ಸೀಟುಗಳು ಕಡಿಮೆಯಾಗಲಿವೆ. ಅದಕ್ಕೆ ಕಾಂಗ್ರೆಸ್‌ನವರೇ ಕಾರಣರಾಗುತ್ತಾರೆ. ಮಾಜಿ ಪ್ರಧಾನಿ ರಾಜೀವ್ ಗಾಂಧಿಯವರ ಕಾಲದಲ್ಲಿ ಸಂಸತ್ತಿನಲ್ಲಿ ಮೂರನೆ ಎರಡು ಭಾಗ ಬಹುಮತ ಇದ್ದರೂ ಅವರು ಮಹಿಳಾ ಮಿಸಲಾತಿ ಜಾರಿಗೆ ತರಲಿಲ್ಲ. ಪ್ರಿಯಾಂಕಾ ಗಾಂಧಿಯವರೆ ನಿಮ್ಮ ತಂದೆಗೆ ಬಹುಮತ ಇದ್ದರೂ ಯಾಕೆ ಮಾಡಲಿಲ್ಲ ಇದಕ್ಕೆ ಉತ್ತರ ಕೊಡಿ ಎಂದು ಆಗ್ರಹಿಸಿದರು.

**ಭರವಸೆ ಇಡಿ:** ಎಲ್ಲ ಮಹಿಳೆಯರು ಭರವಸೆಯನ್ನು ಇಡಿ ಮಹಿಳೆಯರು ಹತಾಶರಾಗುವ ಅವಶ್ಯಕತೆ ಇಲ್ಲ. ಭರವಸೆ ಇಡಿ. ಮೀಸಲಾತಿ ಪಡೆದುಕೊಳ್ಳುವ ಶಕ್ತಿ ನಿಮಗೆ ಇದೆ. ಶಕ್ತಿಯ ಪ್ರದರ್ಶನ ಮಾಡಿ. ಇಡೀ ದೇಶದಲ್ಲಿ ನಾರಿ ಶಕ್ತಿಯ ಕೂಗಿಗೆ ಪಜಾಪಭುತ್ವದಲ್ಲಿ ಜನರ ಆಶೋತ್ತರಗಳೇ ಯಶಸ್ವಿ ಆಗುವುದು. ಶೇ 33% ಮಹಿಳಾ ಮೀಸಲಾತಿಯು ಅದೇ ರೀತಿ ಯಶಸ್ವಿಯಾಗುತ್ತದೆ ಎನ್ನುವ ವಿಶ್ವಾಸ ಇದೆ ಎಂದು ಹೇಳಿದರು.

## ಹವಳ ಮುತ್ತು ಉದುರುತ್ತಾವ್ರೀಪ್ಪೋ: ಕಾರ್ಣಿಕದ ನುಡಿ



**ಬೆಳಗಾವಿ ವಾರ್ತೆ ಧಾರವಾಡ (ಉಪ್ಪಿನಬೆಟಗೇರಿ):** 'ಗುಡುಗು ಮಿಂಚು ಬಾಳೈತ್ರಿಪ್ಪೋ, ಮಳಿ ಬೆಳಿ ಸಂಪೈತ್ರಿಪ್ಪೋ, ಹವಳಾ ಮುತ್ತು ಉದುರುತ್ತಾವ್ರೀಪ್ಪೋ, ಮನಿ ಮನಿಯೊಳಗ ಜಗಳ ಅಕ್ಕಾವ್ರಿಪ್ಪೋ, ರೈತರು ಎಲ್ಲಾರೂ ಕೂಡಿ ಚೆಂದಾಗಿ ಜಾತ್ರಿ ಮಾಡ್ರಿಪ್ಪೋ.' ಇದು ಧಾರವಾಡ ತಾಲೂಕಿನ ಮರೇವಾಡ ಗ್ರಾಮದಲ್ಲಿ ಶುಕ್ರವಾರ ಜರುಗಿದ ಬಸವಣ್ಣ (ನಂದೀಶ್ವರ) ದೇವರ ವಾರ್ಷಿಕ ಜಾತ್ರಾ ಮಹೋತ್ಸವದ ಕಾರ್ಣಿಕದ ನುಡಿ. ಸಾಯಂಕಾಲ ಸಕಲ ಸದ್ಭಕ್ತರ ಜಯಘೋಷಗಳ ಮಧ್ಯೆ ಜರುಗಿದ ರಥೋತ್ಸವದ ಕೊನೆಗೆ ರಥದಲ್ಲಿ ಕುಳಿತಿದ್ದ ಅಮ್ಮಿನಬಾವಿ ಬಸವಣ್ಣ ದೇವರ ದೇವಾಲಯದ ಪ್ರಧಾನ ಅರ್ಚಕ ಬಸವರಾಜ ಪೂಜಾರ ವರ್ಷದ ಆಗು ಹೋಗುಗಳ ಕುರಿತು ಕಾರ್ಣಿಕ ನುಡಿದರು. ಅಮ್ಮಿನಬಾವಿ ಬಸವಣ್ಣ (ನಂದೀಶ್ವರ) ದೇವರ ಪಾಲ್ಕಿ ನಂದಿಕೋಲುಗಳು ಬರುತ್ತಿದ್ದಂತೆ ಅಲಂಕೃತ ರಥಕ್ಕೆ ವೈದಿಕರುಗಳಾದ ಸೋಮಲಿಂಗಶಾಸ್ತ್ರಿ ಗುಡ್ಡದಮಠ, ಶೇಖರಯ್ಯ ಹಿರೇಮಠ ಹಾಗೂ ಅಂಕಲಯ್ಯ ಯರಗಂಬಳಿಮಠ ಪೂಜೆ ಸಲ್ಲಿಸಿದರು.

ಅಮ್ಮಿನಬಾವಿ ಸಂಸ್ಥಾನ ಪಂಚಗೃಹ ಹಿರೇಮಠದ ಶ್ರೀಅಭಿನವ ಶಾಂತಲಿ0ಗ ಶಿವಾಚಾರ್ಯ ಸ್ವಾಮೀಜಿ ರಥೋತ್ಸವಕ್ಕೆ ಚಾಲನೆ ನೀಡಿದರು. ಹುಬ್ಬಳ್ಳಿ ಧಾರವಾಡ ಹಾಗೂ ಸುತ್ತಲಿನ ಗ್ರಾಮಗಳ ಭಕ್ತರು, ಬೆಳಗಾವಿ, ಗದಗ, ಹಾವೇರಿ ಜಿಲ್ಲೆಗಳ ಭಕ್ತರು ಸೇರಿದಂತೆ ಸಹಸ್ರಾರು ಭಕ್ತರ ಮಧ್ಯೆ ಅದ್ದೂರಿಯಾಗಿ ರಥೋತ್ಸವ ಜರುಗಿತು.

ವಿಶೇಷ ಪೂಜೆ: ಜಾತ್ರೆಯ ಅಂಗವಾಗಿ ಶುಕ್ರವಾರ ಪ್ರಾತಃಕಾಲ ಬಸವಣ್ಣ(ನಂದೀಶ್ವರ) ದೇವರ ಶಿಲಾ ವಿಗ್ರಹಕ್ಕೆ ಏಕಾದಶ ಮಹಾರುದ್ರಾಭಿಷೇಕ, ನೂರೊಂದು ಬಿಲ್ವಾರ್ಚನೆ ಮತ್ತು ಪುಷ್ಪಾಲಂಕಾರದ ವಿಶೇಷ ಪೂಜೆ ನಡೆಯಿತು. ನಂತರ ನಡೆದ ದಾಸೋಹ ಸೇವೆಯಲ್ಲಿ ನಿರಂತರ ಅನ್ನಸಂತರ್ಪಣೆ ಜರುಗಿತು.

## ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

ಗದಗ: 2024–25 ನೇ ಸಾಲಿನ ರೋಣ, ಗಜೇಂದ್ರಗಡ ತಾಲ್ಲೂಕಿನ ಮುಂಗಾರು ಮತ್ತು ಹಿಂಗಾರು ಹಂಗಾಮಿನ ತಿರಸ್ಕೃತಗೊಂಡ ಬೆಳೆ ವಿಮೆ ಪ್ರಸ್ತಾವಣೆಗಳಿಗೆ ರೈತರಿಂದ ಆಕ್ಷೇಪಣೆ ಸಲ್ಲಿಸುವ ಬಗ್ಗೆ ರೋಣದ ಸಹಾಯಕ ಕೃಷಿ ನಿರ್ದೇಶಕರು, ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಗದಗ: ನಗರದ ಗದಗ ಬೆಟಗೇರಿ ನಗರಸಭೆ ಗಂಗಿಮಡಿ ವಾರ್ಡ್ ನಂ. 22 ರಲ್ಲಿ ಗಂಗಿಮಡಿ ಮಾದರಿ ಅಂಗನವಾಡಿ ಕೇಂದ್ರ 319ರ ಭೂಮಿಪೂಜೆಗೆ ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಅಕ್ಬರಸಾಬ್ ಬಬರ್ಜಿ, ಬಿ.ಬಿ. ಅಸೂಟಿ, ಅಶೋಕ ಮಂದಾಲಿ ಉಪಸ್ಥಿತರಿದ್ದರು.



ಗದಗ: ನಗರದ ಉಪ ವಿಭಾಗಾಧಿಕಾರಿಗಳ ಕಛೇರಿ ಎದುರಿಗೆ, ಮುಳಗುಂದ ನಾಕಾ ಹತ್ತಿರ, ವಾಯವ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಗದಗ ವಿಭಾಗ ಇವರು SCP/TSP ಅನುದಾನದಡಿಯಲ್ಲಿ ನಿರ್ಮಿಸಿದ ವಾಣಿಜ್ಯ ಮಳಿಗೆಗಳ ಉದ್ಘಾಟಗೆ ಟೇಪ್ ಕತ್ತರಿಸುವ ಮೂಲಕ ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ. ಆರ್, ಅಕ್ಬರಸಾಬ್ ಬಬರ್ಜಿ, ಬಿ.ಬಿ. ಅಸೂಟಿ, ಅಶೋಕ ಮಂದಾಲಿ ಉಪಸ್ಥಿತರಿದ್ದರು.



ಬಾಗಳಲಕೋಟೆ: ಆಶ್ರಯ ಸಮಿತಿ ಸದಸ್ಯರಿಗೆ ಬಸವೇಶ್ವರ ಬ್ಯಾಂಕ್ ನಿಂದ ಸನ್ಮಾನ ಬಾಗಲಕೋಟ –ನೂತನವಾಗಿ ಆಶ್ರಯ ಸಮಿತಿಗೆ ನೇಮಕಗೊಂಡಿದ್ದ ಸದಸ್ಯರೆಲ್ಲರನ್ನು ನಗರದ ಶ್ರೀ ಬಸವೇಶ್ವರ ಸಹಕಾರಿ ಬ್ಯಾಂಕ್ ಇಂದಿಲ್ಲಿ ಗೌರವದಿಂದ ಸನ್ಮಾನಿಸಲಾಯಿತು. ಸದಸ್ಯರಾದ ಅಂದಾನಪ್ಪ ಶಿವಪ್ಪ ಬ್ಯಾಡಗಿ,ಪ್ರೇಮನಾಥ ಗರಸಂಗಿ,ಶಫಿಕ್ ಜಮದಾರ,ಶ್ರೀಮತಿ ರೇಣುಕಾ ಸೂಳಿಕೇರಿ ಇವರುಗಳನ್ನು ಬ್ಯಾಂಕಿನ ಸಭಾಂಗಣದಲ್ಲಿ ಬ್ಯಾಂಕಿನ ಅದ್ಯಕ್ಷ ಪ್ರಕಾಶ ತಪಶೆಟ್ಟಿ ಶಾಲು ಹೊದಿಸಿ ಸನ್ಮಾನಿಸಿ ಶುಭಕೋರಿ ಜನ

## ಅಯ್ಯಾಚಾರವೆಂಬುದು ಆಚಾರ, ವಿಚಾರ ಮತ್ತು ಶಿವಾಚಾರವನ್ನು ಪಾಲಿಸುವ ಧಾರ್ಮಿಕ ಪ್ರಕ್ರಿಯೆ

**ಬೆಳಗಾವಿ ವಾರ್ತೆ ಗದಗ:** ಅಯ್ಯಾಚಾರವೆಂಬುದು ಆಚಾರ, ವಿಚಾರ ಮತ್ತು ಶಿವಾಚಾರವನ್ನು ಪಾಲಿಸುವ ಜವಾಬ್ದಾರಿಯನ್ನು ವಹಿಸುವ ಧಾರ್ಮಿಕ ಪ್ರಕ್ರಿಯೆಯಾಗಿದೆ ಎಂದು ಬನ್ನಿಕೊಪ್ಪದ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ತಾಲೂಕಿನ ನರಸಾಪೂರ ಗ್ರಾಮದ ರಂಭಾಪೂರಿ ಶಾಖಾ ಹಿರೇಮಠ ಗುರುಕುಲದಲ್ಲಿ ಪಂಚವಟಿ ಧಾರ್ಮಿಕ ಗುರುಕುಲ ಜನಕಲ್ಯಾಣ ಟ್ರಸ್ಟ್ ಹಾಗೂ ಅಖಿಲ ಭಾರತ ಜಂಗಮ ಸೇವಾ ಸಮಿತಿ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಜಂಗಮ ವಟುಗಳಿಗೆ ಅಯ್ಯಾಚಾರ ಹಾಗೂ ಲಿಂಗದೀಕ್ಷೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಅಯ್ಯಾಚಾರ ವೀರಶೈವ ಲಿಂಗಾಯತ ಸಮುದಾಯದಲ್ಲಿ ಜಂಗಮ ವಟುಗಳಿಗೆ ನೀಡಲಾಗುವ ವಿಶೇಷ ದೀಕ್ಷಾ ಸಂಸ್ಕಾರವಾಗಿದೆ ಎಂದು ಹೇಳಿದರು.

ಪ್ರಪಂಚದಲ್ಲಿ ಶಿವದೀಕ್ಷೆಗಿಂದ ದೊಡ್ಡ ದೀಕ್ಷೆ ಬೇರೊಂದಿಲ್ಲ. ಶಿವದೀಕ್ಷೆ ತೆಗೆದುಕೊಂಡವರಿಗೆ ಲೌಕಿಕ ಬದುಕಿನಲ್ಲಿ ದೈವಿಗುಣ ಹೆಚ್ಚಾಗಲಿದೆ. ಧರ್ಮಾರಚಣೆ ಮೂಲಕ ಲಿಂಗದೀಕ್ಷೆ ಪಡೆದುಕೊಂಡರೆ ದೇವತಾ ಮನುಷ್ಯರಾಗುತ್ತಾರೆ. ಅದೇ ರೀತಿ ಲಿಂಗದೀಕ್ಷೆ ಪಡೆದವರು ಇನ್ನು ಮುಂದೆ ಧರ್ಮಪರಿಪಾಲನೆ ಮಾಡಿಕೊಂಡು ಸನ್ಮಾರ್ಗದಲ್ಲಿ ನಡೆಯಬೇಕು ಎಂದು ಹೇಳಿದರು.

ವೀರಶೈವ ಸಂಪ್ರದಾಯದಂತೆ ಜಂಗಮವಟುಗಳಿಗೆ ನೀಡುವ ಶಿವದೀಕ್ಷೆ( ಅಯ್ಯಾಚಾರ) ಪದ್ಧತಿಯನ್ನು ಜಂಗಮರು ಉಳಿಸಿಕೊಂಡು ಹೋಗಬೇಕು. ಪೂರ್ವಜರ ಆಚಾರ, ವಿಚಾರಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಮೂಲಕ ಧರ್ಮ ರಕ್ಷಣೆಗೆ ಮುಂದಾಗಬೇಕು ಎಂದರು.

ಇಂದಿನ ದಿನಮಾನಗಳಲ್ಲಿ ಉಚಿತವಾಗಿ ಆಯ್ಯಾಚಾರ ಹಾಗೂ ಲಿಂಗ ದೀಕ್ಷೆ ಮಾಡುವುದು ಹೆಮ್ಮೆಯ ವಿಷಯ. ಈ ದಿಶೆಯಲ್ಲಿ ಪ್ರತಿ ವರ್ಷವೂ ಕೂಡಾ ಗುರುಕುಲ ಹಾಗೂ ಸಮಿತಿಯಿಂದ ಇಂತಹ ಧಾರ್ಮಿಕ ಕೆಲಸಗಳು ನಡೆಯಲಿ ಎಂದು ತಿಳಿಸಿದರು.

ಮಲ್ಲನಕೇರಿ ವಿರಕ್ತಮಠದ ಚನ್ನಬಸವ ಸ್ವಾಮೀಜಿ ಮಾತನಾಡಿ, 30 ದಿನಗಳ ಉಚಿತ ಸಂಸ್ಕಾರವನ್ನು ಹಮ್ಮಿಕೊಂಡಿದ್ದು ತುಂಬಾ ಒಳ್ಳೆಯ ವಿಷಯ. ಇಂತಹ ಕೆಲಸ ಕಾರ್ಯಗಳು ಹೆಚ್ಚು ಪ್ರಚಲಿತವಾಗಲಿ ಹಾಗೂ ಧಾರ್ಮಿಕತೆಯ ಬಗ್ಗೆ ಮಕ್ಕಳಲ್ಲಿ ಇನ್ನೂ ಹೆಚ್ಚಿನ ಜ್ಞಾನ ನೀಡುವುದು ಉತ್ತಮ. ಇಂತಹ ಉತ್ತಮ ಕಾರ್ಯವನ್ನು ಮಾಡಿದ್ದಕ್ಕೆ ಅಭಿನಂದನೆಗಳನ್ನು ತಿಳಿಸಿದರು.



ಅಖಿಲ ಭಾರತ ಜಂಗಮ ಸೇವಾ ಸಮಿತಿಯ ಅಧ್ಯಕ್ಷ ಪ್ರಭಯ್ಯ ದಂಡಾವತಿಮಠ ಅಧ್ಯಕ್ಷತೆ ವಹಿಸಿ ಮಾತನಾಡಿ, ಗುರುಕುಲದ ಜೊತೆಗೂಡಿ ಪ್ರತಿವರ್ಷವೂ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜನರನ್ನು ಧಾರ್ಮಿಕತೆಯ ಮಹತ್ವದ ಬಗ್ಗೆ ಮಾಹಿತಿ ನೀಡಲು ಕೈಜೋಡಿಸುವುದಾಗಿ ತಿಳಿಸಿದರು.

ನೇತೃತ್ವ ವಹಿಸಿದ್ದ ಪಂಚವಟಿ ಧಾರ್ಮಿಕ ಗುರುಕುಲ ಜನಕಲ್ಯಾಣ ಟ್ರಸ್ಟ್‌ನ ಅಧ್ಯಕ್ಷ ಡಾ. ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಪ್ರತಿಯೊಂದು ಜನಾಂಗದವರಿಗೆ ಧಾರ್ಮಿಕತೆಯ ಬಗ್ಗೆ ಮನವರಿಕೆ ಮಾಡುವುದು ಹಾಗೂ ಅದನ್ನು ಸರಿಯಾದ ರೀತಿಯಲ್ಲಿ ಎಲ್ಲಾ ಜನರು ಉಪಯೋಗಿಸಿಕೊಂಡಾಗ ಅದು ಒಂದು ಉತ್ತಮವಾದ ಕಾರ್ಯವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಂಜುನಾಥ ಹಳ್ಳೂರಮಠ, ಮೃತ್ಯುಂಜಯ ಭಿಕ್ಷಾವತಿಮಠ, ತೋಟಯ್ಯ ಗುಡ್ಡಿಮಠ, ಕೆ.ಎಸ್. ಹಿರೇಮಠ, ವೀರಯ್ಯ ಹೊಸಮಠ, ಲಿಂಗಯ್ಯ ಹಿರೇಮಠ, ವೀರಬಸಯ್ಯ ವಿರಕ್ತಮಠ ಸೇರಿ ಅನೇಕರು ಇದ್ದರು.

### ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಜನ್–2: ಚಾಪಿಯನ್ ಪಟ್ಟ ಅಲಂಕರಿಸಿದ ಎಲೈಟ್ ಇಲೆವೆನ್ ತಂಡ

## ಫೈನಲ್ ಪಂದ್ಯ ನೋಡಲು ಕ್ಕಿಕ್ಕಿರಿದು ಆಗಮಿಸಿದ್ದ ಕ್ರಿಕೆಟ್ ಅಭಿಮಾನಿಗಳು

**ಬೆಳಗಾವಿ ವಾರ್ತೆ ಗದಗ:** ನಗರದ ವಿದ್ಯಾದಾನ ಸಮಿತಿ ಮೈದಾನದಲ್ಲಿ ಕಳೆದ 20 ದಿನಗಳಿಂದ ಕ್ರಿಕೆಟ್ ಅಭಿಮಾನಿಗಳನ್ನು ರಂಜಿಸಿದ್ದ ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಜನ್–2ರ ಪಂದ್ಯಾವಳಿಯಲ್ಲಿ ಎಲೈಟ್ ಇಲೆವೆನ್ 7 ವಿಕೆಟ್ ಅಂತರದಲ್ಲಿ ಗೆಲುವು ದಾಖಲಿಸುವ ಮೂಲಕ ಚಾಂಪಿಯನ್ ತಂಡವಾಗಿ ಹೊರಹೊಮ್ಮಿತು. ಎದುರಾಳಿ ಸ್ಟೈಕರ್ಸ್ ತಂಡ ರನ್ನರ ಅಪ್‌ಗೆ ತೃಪ್ತಿಪಟ್ಟಿತು.

ಫೈನಲ್ ಪಂದ್ಯದಲ್ಲಿ ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡ ಸ್ಟೈಕರ್ಸ್ ತಂಡ ಮೊದಲ ವಿಕೆಟ್ ನಷ್ಟಕ್ಕೆ 6 ಓವರ್‌ಗಳಲ್ಲಿ 48 ರನ್ ಗಳಿಸಿದರೂ ನಿಗದಿತ 10 ಓವರ್‌ಗಳ್ಲಲಿ 5 ವಿಕೆಟ್ ನಷ್ಟಕ್ಕೆ 72 ರನ್ ಗಳಿಸಲಷ್ಟೇ ಶಕ್ತವಾಯಿತು.

ಸ್ಟೈಕರ್ಸ್ ತಂಡದ ಪರವಾಗಿ ನಾಯಕ ಫಯಾಜ್ 18 ಎಸೆತಗಳಲ್ಲಿ 12 ರನ್ ಗಳಿಸಿದರೆ, ತಯ್ಯಬ್ 21ಎಸೆತಗಳಲ್ಲಿ 5 ಫೋರ್ 1 ಸಿಕ್ಸರ್ ಮೂಲಕ 36 ರನ್




ಗಳಿಸಿದರು. ನಂತರ ಬಂದ ಬ್ಯಾಟ್ಸ್‌ಮನ್ ಗಳಾದ ಅಲ್ತಾಮಾಶ್ 2, ಜಗದೀಶ 1, ಚನ್ನಪ್ಪ 4, ರಿಯಾಜ್ 1 ಹಾಗೂ ಆರೀಫ್ 2 ರನ್ ಗಳಿಸಿದರು. ಎಲೈಟ್ ಇಲೆವೆನ್ ತಂಡದ ಪರವಾಗಿ ನಿಹಾಲ್ ಆಕಾಶ್ 2 ಓವರ್‌ಗಳ್ಲಿ 13 ರನ್ ನೀಡಿ 2 ವಿಕೆಟ್, ಶಿವು 2 ಓವರ್‌ಗಳಲ್ಲಿ ಮೇಡನ್ ಸಹಿತ 3 ರನ್ ನೀಡಿ 2 ವಿಕೆಟ್ ಪಡೆದು ಮಿಂಚಿದರು. ಇದಕ್ಕುತ್ತರವಾಗಿ ಬ್ಯಾಟಿಂಗ್ ನಡೆಸದ ಎಲೈಟ್ ಇಲೆವೆನ್ ಆರಂಭಿಕ ಬ್ಯಾಟ್ಸ್‌ಮನ್ ವಿಜಯ ಬಾರಕೇರ್ 21 ಎಸೆತಗಳಲ್ಲಿ 3 ಫೋರ್ ಸಹಿತ 30 ರನ್ ನೀಡಿ ಅತ್ಯುತ್ತಮ ಆರಂಭ ಒದಗಿಸಿದರು. ಪ್ರೇಮ್ ಬಿ. ಶೂನ್ಯ ಕ್ಕೆ ಔಟಾದರೆ, ಬಾಲಿಂಗ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿದ್ದ ನಿಹಾಲ್ ಆಕಾಶ 18 ಎಸತಗಳಲ್ಲಿ 3 ಫೋರ್, 1 ಸಿಕ್ಸರ್ ಸಹಿತ 27 ರನ್ ಗಳಿಸಿದರು. ಸಂತೋಷ ನಾಯಕ 5 ಜಗದೀಶರಡ್ಡಿ 8 ರನ್ ಗಳಿಸಿ ಗೆಲುವಿನ ನಗೆ ಬೀರಿದರು. ಸ್ಟೈಕರ್ಸ್ ತಂಡದ ಪರವಾ ಗಿ ಆರೀಫ್ 2 ಓವರ್‌ಗಳಲ್ಲಿ 13 ರನ್ ನೀಡಿ 1 ವಿಕೆಟ್ ಪಡೆದರು. ಉಳಿದಂತೆ ಅಕ್ಷಯ ಲಮಾಣಿ ಹಾಗೂ ಅಲ್ತಾಮಾಶ ತಲಾ ಒಂದು ವಿಕೆಟ್ ಪಡೆದರು. ಬ್ಯಾಟಿಂಗ್ ಹಾಗೂ ಬಾಲಿಂಗ್ ನಲ್ಲಿ ಉತ್ತಮ ಪ್ರದರ್ಶನ ನೀಡಿದ ಆಲ್‌ರೌಂಡರ್ ನಿಹಾಲ್ ಆಕಾಶ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಸ್ಟೈಕರ್ಸ್ ತಂಡ ತಯ್ಯಬ್ ಉತ್ತಮ ಬ್ಯಾಟರ್ ಎನಿಸಿದರೆ, ಎಲೈಟ್ ಇಲೆವೆನ್ ತಂಡದ ಶಿವು ಉತ್ತಮ ಬಾಲರ್ ಎನಿಸಿದರು.

ನಂತರ ಪಂದ್ಯಾವಳಿ ವೀಕ್ಷಣೆಗೆ ಆಗಮಿಸಿದ್ದ ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರು ವಿಜೇತ ಹಾಗೂ ರನ್ನರ್ ಅಪ್ ತಂಡಗಳಿಗೆ ಟ್ರೋಫಿ ವಿತರಿಸಿದರು. ವಿಜೇತ ಎಲೈಟ್ ಇಲೆವೆನ್ ತಂಡ 1.50 ಲಕ್ಷ ರೂ. ನಗದು ಪ್ರಶಸ್ತಿಯೊಂದಿಗೆ ಟ್ರೋಫಿ ಪಡೆದುಕೊಂಡಿತು.

## ಕಾರ್ಮಿಕರು ದೇಶಾಭಿವೃದ್ಧಿಯ ಹರಿಕಾರರು



**ಬೆಳಗಾವಿ ವಾರ್ತೆ ವಿಜಯಪುರ:** ದೇಶದ ಆರ್ಥಿಕ ಪ್ರಗತಿಗೆ ಕಾರ್ಮಿಕ ಬಂಧುಗಳೇ ನೇರ ಕಾರಣರಾಗಿದ್ದಾರೆ. ಎಲ್ಲ ಜನರು ಸತ್ಯಶುದ್ಧ ಕಾಯಕವನ್ನು ಮಾಡುವರೇ ಅಲ್ಲಿ ವ್ಯಷ್ಠಿ ಮತ್ತು ಸಮಷ್ಠಿಗಳು ಅಭಿವೃದ್ಧಿ ಹೊಂದುತ್ತವೆ. ಮಾಲಿಕರು ಮತ್ತು ದುಡಿದ ವರ್ಗದ ಮಧ್ಯೆ ಸೌಹಾರ್ದಯುತ ವಾತಾವರಣವಿದ್ದಾಗ ಮಾತ್ರ ಪ್ರಗತಿಸಾಧ್ಯವೆಂದುಕೆ.ಆರ್.ಅರಕೇರಿಮಠ ಹೇಳಿದರು.

ಅವರು ವೀರಶೈವ ಲಿಂಗಾಯತ ಮಹಾಸಭಾದಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ ಕಾಯಕದಿನ ಮತ್ತು ದತ್ತಿ ಸಮಾರಂಭ ಕುರಿತು ಮಾತನಾಡಿದರು. ಲಿಂ. ಗುರಪ್ಪ ಬೊಳಿಶೆಟ್ಟಿ ಬಂ. ಚನ್ನಪ್ಪ ಬಿಜ್ಜರಗಿ, ಲಿಂ. ಬಸಪ್ಪ ಸಾಲಕ್ಕಿ ಅವರ ಸ್ಮರಣಾರ್ಥ ನಡೆದ ಕಾರ್ಯಕ್ರಮದಲ್ಲಿ ಶಕುಂತಲಾ ಮೋಸಲಗಿ ಗಂಗಾಧರ ಸಾಲಕ್ಕಿ ಮತ್ತು ಮ.ಗು. ಯಾದವಾಡ ಅವರು ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಅಧ್ಯಕ್ಷತೆ ವಹಿಸಿದ ವಿ.ಸಿ. ನಾಗಠಾಣರು ಯುರೋಪ ಹಾಗೂ ಅಮೇರಿಕಾಗಳಲ್ಲಿ ನಡೆದ ಕಾರ್ಮಿಕರ ಕ್ರಾಂತಿಯ ಮೊದಲು ನಾಲ್ಕಕು ನೂರು ವರ್ಷಗಳ ಮುಂಚೆ ಶರಣರು ಜಗತ್ತಿಗೆ ಕ್ರಾಂತಿರೂಪದ ಕಾಯಕ ದಾಸೋಹ ತತ್ವಗಳನ್ನು ನೀಡಿ ಸಮೃದ್ಧಿ ಸಮಾಜ ನಿರ್ಮಾಣಕ್ಕೆ ನಾಂದಿ ಹಾಡಿದರೆಂದು ಹೇಳಿದರು.

ಶರಣ ಸಾಹಿತ್ಯ ಪರಿಷತ್ತು 76 ವರ್ಷದ ವಯೋವೃದ್ಧ ಮತ್ತು 40 ವರ್ಷಗಳಿಂದ ಸಮಗಾರ ಕಾಯಕ ಮಾಡುತ್ತಿರುವ ಶರಣ ಕಲ್ಲಪ್ಪ ಕಂಟೆಪ್ಪ ಶಹಪೂರ ಅವರಿಗೆ ಕಾಯಕಶೀಲ ಪ್ರಶಸ್ತಿ ನೀಡಿ ಗೌರವಿಸಿತು. ಪರಿಷತ್ತಿನ ಅಧ್ಯಕ್ಷ ಜಂಬುನಾಥ ಕಂಚ್ಯಾಣಿ ಸ್ವಾಗತಕೋರಿ ಪರಿಷತ್ತಿನ ಸಾಧನೆ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಈರಣ್ಣ ತೊಂಡಿಕಟ್ಟಿ ವಂದಿಸಿದರು. ಬಿ.ಎಂ. ಪಾಟೀಲ, ಸಂಗೀತಾ ಮಠಪತಿ ಎಸ್.ವಾಯ್. ಗದಗ, ಸೋಮನಗೌಡ ಪಾಟೀಲ, ಎಲ್.ಪಿ. ಬಿರಾದಾರ ಅಮ್ಮಜಿಗೋಳ ಬಿ.ಸಿ. ಸಾರವಾಡ, ಅಕ್ಕನ ಬಳಗದ ಸದಸ್ಯರು ಉಪಸ್ಥಿತರಿದ್ದರು.

## ವೃತ್ತಿ ತರಬೇತಿ (ಐಟಿಐ) ಪ್ರವೇಶಕ್ಕೆ ಅರ್ಜಿ

ಬಾಗಲಕೋಟೆ: ಎನ್.ಸಿ.ವಿ.ಟಿ ಸಂಯೋಜನೆ ಹೊಂದಿರುವ ಬೀಳಗಿ ಸರ್ಕಾರಿ ತರಬೇತಿ ಸಂಸ್ಥೆಯಲ್ಲಿ ಎರಡು ವರ್ಷಗಳ ವೃತ್ತಿ ತರಬೇತಿಗಳಾದ ಎಲೆಕ್ಟ್ರೀಷಿಯನ್, ಫಿಟ್ಟರ, ಟರ್ನರ್, ಎಲೆಕ್ಟ್ರಾನಿಕ್ಸ್, ಮೆಕ್ಯಾನಿಕ್ ಹಾಗೂ ಉದ್ಯೋಗ ಯೋಜನೆಗಳ ವೃತ್ತಿಗಳಾದ ಮೆಕ್ಯಾನಿಕ್ ಎಲೆಕ್ಟ್ರಿಕ್ ವೆಹಿಕಲ್, ಬೆಸಿಕ್ ಡಿಜೈನರ್ & ವರ್ಚ್ಯೂವಲ್ ವೆರಿಫೈಯರ್, ಅಡಾನ್ಸ್ ಸಿಎನ್‌ಎಸ್ ಮಷಿನಿಂಗ್ ಟೆಕ್ನಿಷಿಯನ್, ಒಂದು ವರ್ಷ ವೃತ್ತಿಗಳಾದ ಕಂಪ್ಯೂಟರ ಆಪರೇಟರ & ಪ್ರೋಗ್ರಾಮಿಂಗ್ ಅಸಿಸ್ಟಂಟ್, ಟಾಟಾ ವೃತ್ತಿಗಳಾದ ಇಂಡಸ್ಟ್ರೀಯಲ್ ರೋಬೋಟಿಕ್ & ಡಿಜಿಟಲ್ ಮ್ಯಾನಿಫಾಕ್ಚರಿಂಗ್ ಟೆಕ್ನಿಷಿಯನ್, ಮ್ಯಾನುಫಾಚರಿಂಗ್ ಪ್ರೋಸೆಸ್ ಕಂಟ್ರೋಲ್ & ಆಟೋಮ್ಯಾಟಿಕ್, ಆರ್ಟಿಸನ್ ಯುಸಿಂಗ್ ಅಡ್ವಾನ್ಸ್ ಟೂಲ್ ವೃತ್ತಿಗಳಿಗೆ ಆಗಸ್ಟ-2026ನೇ ಶೈಕ್ಷಣಿಕ ಸಾಲಿಗಾಗಿ ಆನ್‌ಲೈನ್ ತಿತಿತಿ.ಥಿಣಜ.ಞಚಿಡಿಟಿಚಿಣಚಿಞಚಿ.ರಠಡಿ.ಟಿ ಮೂಲಕ ಅರ್ಜಿಗಳನ್ನು ಮೇ 8 ರೊಳಗಾಗಿ ಸಲ್ಲಿಸುವಂತೆ ಬೀಳಗಿ ಕೈಗಾರಿಕಾ ತರಬೇತಿ ಕೇಂದ್ರದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08425-276458ಗೆ ಸಂಪರ್ಕಿಸಬಹುದಾಗಿದೆ.

# ನಮ್ಮ ಸರಕಾರ ಅಭಿವೃದ್ಧಿಗೆ ಬದ್ಧ: ಸಚಿವ ಎಂ.ಬಿ. ಪಾಟೀಲ

**ಬೆಳಗಾವಿ ವಾರ್ತೆ ವಿಜಯಪುರ:** ಕಳೆದ ಮೂರು ವರ್ಷಗಳಲ್ಲಿ ಮುಖ್ಯಮಂತ್ರಿ ಸಿದ್ರಾಮಯ್ಯ ಅವರ ನೇತೃತ್ವದ ನಮ್ಮ ಸರ್ಕಾರ ಎಲ್ಲ ವರ್ಗದ ಜನರ ಉಜ್ವಲ ಭವಿತವ್ಯದ ಆಶಾದೀಪ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಜನಸಾಮಾನ್ಯರ ಬದುಕಿಗೆ ನೆರವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಣಕಾಸು ತಜ್ಞರಾಗಿದ್ದಾರೆ. ಎಲ್ಲ ವರ್ಗದವರ ಅಭಿವೃದ್ಧಿಗಾಗಿ ಯೋಜನೆಗಳನ್ನು ರೂಪಿಸಿದೆ. ಆರೋಗ್ಯ, ಶಿಕ್ಷಣ ಸೇರಿದಂತೆ ವಿವಿಧ ಎಲ್ಲ ಆಯಾಮಗಳಲ್ಲೂ ನಮ್ಮ ಸರ್ಕಾರ ಅಭಿವೃದ್ಧಿಗೆ ಬದ್ಧವಾಗಿದೆ ಎಂದು ಬೃಹತ್ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಬಿ. ಪಾಟೀಲ ಅವರು ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಗರಾಭಿವೃದ್ಧಿಕೋಶ, ಇಂಜನೀಯರಿಂಗ್ ಘಟಕ ಬೆಂಗಳೂರು ಹಾಗೂ ಪೌರಾಡಳಿತ ಇಲಾಖೆ ಬೆಂಗಳೂರು ಇವರ ಸಹಯೋಗದಲ್ಲಿ ಶನಿವಾರ ಜಿಲ್ಲೆಯ ದೇವರಹಿಪ್ಪರಗಿ ತಾಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೂವತ್ತು ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೆರಿಸಿದ ನೂತನ ಕಟ್ಟಡ ಹಾಗೂ ದೇವರಹಿಪ್ಪರಗಿಯ ಪಟ್ಟಣ ಪಂಚಾಯತಿಯ ಕಾರ್ಯಾಲಯದ ನೂತನ ಕಟ್ಟಡದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಈ ಹಿಂದೆ ಬೇಸಿಗೆ ಸಂದರ್ಭದಲ್ಲಿ ಕುಡಿಯುವ ನೀರಿಗೆ ಸಮಸ್ಯೆ ಇತ್ತು. ಆದರೆ ನಾವು ಕೈಗೊಂಡ ನೀರಾವರಿ ಯೋಜನೆಗಳಿಂದಾಗಿ ಜಿಲ್ಲೆಯಲ್ಲಿ ಅಂತರ್ಜಲ ಮಟ್ಟ ಹೆಚ್ಚಾಗಿದೆ. ಇದರಿಂದಾಗಿ ಬಿಸಿಲಿನ ಬೇಗೆ ನೀಗಿದೆ. ಜೊತೆಗೆ ಕೋಟಿ ವೃಕ್ಷ ಅಭಿಯಾನದ ಫಲವಾಗಿ ಹಸಿರು ನಳನಳಿಸುವಂತಾಗಿದ್ದನ್ನು ಕಾಣಬಹುದಾಗಿದೆ ಎಂದರು.ಈ ಬಾರಿ ಬೇಸಿಗೆ ಸಂದರ್ಭದಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿಗಾಗಿ ಯಾವುದೇ ಸಮಸ್ಯೆಯಾಗಬಾರದೆಂಬ ದೂರದೃಷ್ಟಿ ಹೊಂದಿ, ಜಲಾಶಯಗಳಲ್ಲಿ ನೀರು ಕಾಯ್ದಿಟ್ಟುಕೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಈ ಬಾರಿ ಆಗಸ್ಟ್ 1 ರವರೆಗೂ ಕಿಡಿಯು ನೀರಿಗಾಗಿ ನೀರು ಕಾಯ್ದಿಡಲು ಸೂಚಿಸಲಾಗಿದೆ ಎಂದರು. ಶಿಕ್ಷಣ, ಆರೋಗ್ಯ,, ಕುಡಿಯುವ ನೀರು, ನೀರಾವರಿಗೆ ನಮ್ಮ ಸರ್ಕಾರ ಆದ್ಯತೆ ನೀಡಿ ಜನರ ಆಶೋತ್ತರಗಳನ್ನು ಈಡೇರಿಸುವುದರಲ್ಲಿ ಕಾರ್ಯೋನ್ಮುಖವಾಗಿದೆ. ಇದು ನಮ್ಮ ಕರ್ತವ್ಯವಾಗಿದ್ದು, ಅದಕ್ಕೆ ನಮ್ಮ ಸರ್ಕಾರ ಬದ್ಧವಾಗಿದೆ ಎಂದ ಸಚಿವರು, ಜಿಲ್ಲೆಯ ಅಭಿವೃದ್ಧಿ ವಿಷಯದಲ್ಲಿ ಸಹಾಯ ಸಹಕಾರ ನೀಡಿದ ರೈತರು, ಸಾರ್ವಜನಿಕರು ಹಾಗೂ ಅಧಿಕಾರಿಗಳಿಗೆ ಇದೇ ವೇಳೆ ಅಭಿನಂದನೆಗಳನ್ನು ಸಲ್ಲಿಸಿದರು.

ಜಿಲ್ಲೆಯ 178 ಹಳ್ಳ ತುಂಬುವ ಮಹತ್ವಾಕಾಂಕ್ಷಿ ಯೋಜನೆಯನ್ನು ಈಗಾಗಲೇ ಕಾರ್ಯಗತಗೊಳಿಸಲಾಗಿದೆ. ಕ್ಯಾನಲ್ ಜಾಲ ಮೂಲಕ ಹಳ್ಳತುಂಬಿ ಬಾಂದಾರ ನಿರ್ಮಾಣ ಮಾಡಲಾಗುವುದು. ಇದರಿಂದಾಗಿ ಜಿಲ್ಲೆಯಲ್ಲಿ ಮತ್ತಷ್ಟು ಅಂತರ್ಜಲ ಮಟ್ಟ ಹೆಚ್ಚಾಗಲಿದೆ. ತನ್ಮೂಲಕ ಅಂತರ್ಜಲ ಮಟ್ಟ ಹೆಚ್ಚಳದಲ್ಲಿ ದೇಶದಲ್ಲಿಯೇ ವಿಜಯಪುರ ಜಿಲ್ಲೆ ಮಾದರಿಯಾಗಲಿದೆ ಎಂದರು.

ಆರೋಗ್ಯ ಕ್ಷೇತ್ರದಲ್ಲಿ ಈ ಭಾಗದ ಸಾರ್ವಜನಿಕರಿಗೆ ಬಹಳಷ್ಟು ಅನುಕೂಲ ಕಲ್ಪಿಸಲಾಗಿದೆ. ದೇವರಹಿಪ್ಪರಗಿ ಆಸ್ಪತ್ರೆಯನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಿದ್ದರಿಂದ ಈ ಭಾಗದ ಜನತೆಗೆ ಬಹಳಷ್ಟು ಅನುಕೂಲವಾಗಲಿದೆ ಎಂದರು.ಸುಸಜ್ಜಿತವಾದ ಕಟ್ಟಡ ಐಸಿಯು ಬೆಡ್ ಮತ್ತು ಮಕ್ಕಳ ಐಸಿಯು ಬೆಡ್ ಇದೆ. ವೈದ್ಯರ ಅವಶ್ಯಕತೆಯನುಸಾರ ಆರೋಗ್ಯ ಸಚಿವರ ಹಾಗೂ ಸಿಎಂ ಅವರಿಗೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು. ಡಯಾಲಿಸಿಸ್ ಸೆಂಟರ್ ಬೇಡಿಕೆ ಅನುಸಾರ ಮಾಡಿಕೊಡಲು ಪ್ರಯತ್ನಿಸಲಾಗುವುದು. ಸುಸಜ್ಜಿತವಾಗಿ ಕಟ್ಟಡ ನಿರ್ಮಿಸಿದ್ದಾರೆ. ವ್ಯವಸ್ಥಿತವಾಗಿ ನಿರ್ಮಿಸಿದ್ದಾರೆ. ಆರೋಗ್ಯ ಕ್ಷೇತ್ರದಲ್ಲಿ ನಮ್ಮ ಸರ್ಕಾರ ಬದ್ಧವಾಗಿದೆ ಎಂದರು.ವೈದ್ಯಕೀಯ ಹಾಗೂ ಆರೋಗ್ಯ ಕ್ಷೇತ್ರದಲ್ಲಿ ಮಾದರಿಯಾಗಿ ಕಾರ್ಯ ನಿರ್ವಹಿಸಲಾಗುತ್ತಿದೆ. ಇಲ್ಲಿನ ಶಾಸಕರ ಮುತುವರ್ಜಿಯಿಂದ ಇದೆಲ್ಲ ಸಾಧ್ಯವಾಗಿದೆ ಎಂದು ನೆರೆದ ಜನತೆಗೆ ವಿವರಿಸಿದರು.

ದೇವರಹಿಪ್ಪರಗಿ ಶಾಸಕರಾದ ರಾಜುಗೌಡ ಪಾಟೀಲ ಅವರು ಅಧ್ಯಕ್ಷತೆ ವಹಿಸಿ, ಅಭಿವೃದ್ಧಿ ವಿಷಯದಲ್ಲಿ ಮತಕ್ಷೇತ್ರದ ಜನರ ಸಮಸ್ಯೆಗಳಿಗೆ ಸ್ಪಂದಿಸಲಾಗುವುದು. ಹಳ್ಳ ತುಂಬುವುದರಿಂದ ಜಿಲ್ಲೆಯ ರೈತರಿಗೆ ಅನುಕೂಲವಾಗಲಿದೆ. ಸಮುದಾಯ ಆರೋಗ್ಯ ಕೇಂದ್ರ ಮೇಲ್ದರ್ಜೆಗೇರಿಸಿ ಆರೋಗ್ಯ ಕ್ಷೇತ್ರದಲ್ಲಿ ಜನರಿಗೆ ಅನುಕೂಲವಾಗಲಿದೆ. ದೇವರಹಿಪ್ಪರಗಿಯಲ್ಲಿ ಆರೋಗ್ಯಕ್ಕೆ ಗಮನ ಹರಿಸಲಾಗುವುದು. ಕುಡಿಯುವ ನೀರಿಗೆ ಆದ್ಯತೆ, ಹೆಚ್ಚಿನ ಔಷಧಿ, ವೈದ್ಯರು, ಸಿಬ್ಬಂದಿ ಸಂಖ್ಯೆ ಹೆಚ್ಚಿಸಿ, ಈ ಭಾಗದ ಜನತೆಗೆ ಅನುಕೂಲ ಮಾಡಿಕೊಡುವಂತೆ ಜಿಲ್ಲಾ ಉಸ್ತುವಾರಿ ಸಚಿವರಲ್ಲಿ ಮನವಿ ಮಾಡಿದರು. ಅಭಿವೃದ್ಧಿ ವಿಷಯದಲ್ಲಿ ನಾನು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಆಯುಷ್ಮಾನ ಆರೋಗ್ಯ ಹಾಗೂ ಆಶಾ ಕಿರಣ ಯೋಜನೆಯಡಿ ಸಾಂಕೇತಿಕವಾಗಿ ಐದು ಜನರಿಗೆ ಇದೇ ವೇಳೆ ಕನ್ನಡಕ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಶರಣಪ್ಪ ಸುಣಗಾರ, ದೇವರಹಿಪ್ಪರಗಿ ಪಟ್ಟಣ ಪಂಚಾಯತಿಯ ಅಧ್ಯಕ್ಷರಾದ ಶ್ರೀಮತಿ ಜಯಶ್ರೀ ಬಸಪ್ಪ ದೇವಣಗಾಂವ, ತಾಲೂಕಾ ಗ್ಯಾರಂಟಿ ಯೋಜನೆಗಳ ಅಧ್ಯಕ್ಷರಾದ ಸಾಹೇಬಗೌಡ ನಿಂಗಪ್ಪ ಬಿರಾದಾರ, ದೇವರಹಿಪ್ಪರಗಿಯ ಪಟ್ಟಣ ಪಂಚಾಯತಿಯ ಉಪಾಧ್ಯಕ್ಷರಾದ ರಮೇಶ ಮಸಬಿನಾಳ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಸಂಪತ್ ಕುಮಾರ ಗುಣಾರಿ, ನಗರಾಭಿವೃದ್ಧಿಕೋಶದ ಯೋಜನಾ ನಿರ್ದೇಶಕರಾದ ಬದ್ರುದ್ದಿನ್ ಸೌದಾಗರ್, ತಹಶೀಲ್ದಾರ ನಿಂಗಣ್ಣ ಬಿರಾದಾರ, ಪಟ್ಟಣ ಪಂಚಾಯತಿಯ ತಾಲೂಕ ಕಾರ್ಯನಿರ್ವಹಣಾಧಿಕಾರಿಗಳಾದ ಭಾರತಿ ಚೆಲುವಯ್ಯ ಸೇರಿದಂತೆ ಸಾರ್ವಜನಿಕರು ಪಾಲ್ಗೊಂಡಿದ್ದರು.

# ಶ್ರೀ ಬಸವೇಶ್ವರ ಸೊಸಾಯಿಟಿಗೆ 5.35 ಕೋಟಿ ರೂ ಲಾಭ- ಮಲ್ಲಿಕಾರ್ಜುನ ಢವಳೇಶ್ವರ



**ಬೆಳಗಾವಿ ವಾರ್ತೆ ಮೂಡಲಗಿ:** ಪಟ್ಟಣದ ಪ್ರತಿಷ್ಠಿತ ಶ್ರೀ ಬಸವೇಶ್ವರ ಅರ್ಬನ್ ಕೋ-ಆಫ್ ಕ್ರೆಡಿಟ್ ಸೊಸಾಯಿಟಿಯು 2025-26ರ ಆರ್ಥಿಕ ವರ್ಷದ ಅಂತ್ಯಕ್ಕೆ 5.035 ಕೋಟಿ ರೂ ಲಾಭಗಳಸಿ ಪ್ರಗತಿ ಪಥದತ್ತ ಸಾಗಿದೆ ಎಂದು ಸೊಸೈಟಿ ಅಧ್ಯಕ್ಷ ಮಲ್ಲಿಕಾರ್ಜುನ ಭೀ.ಢವಳೇಶ್ವರ ತಿಳಿಸಿದ್ದರು.

ಅವರು ಪಟ್ಟಣದ ಬಸವೇಶ್ವರ ಅರ್ಬನ್ ಕೋ-ಆಫ್ ಕ್ರೆಡಿಟ್ ಸೊಸಾಯಿಟಿಯ 2025-26ರ ಸಾಲಿನ ಸೊಸೈಟಿಯ ಪ್ರಗತಿ ಬಗ್ಗೆ ಕರೆದ ಸಭೆಯಲ್ಲಿ ಮಾತನಾಡಿ, ಸೊಸೈಟಿಯು ಮಾರ್ಚ ಅಂತ್ಯಕ್ಕೆ 11436 ಶೇರುದಾರರನ್ನು ಹೊಂದಿ 6.90 ಕೋಟಿ ರೂ.ಶೇರು ಬಂಡವಾಳ, 27.21 ಕೋಟಿ ರೂ ನಿಧಿಗಳು, ಸಾರ್ವಜನಿಕ ವಲಯದಿಂದ 274.36 ಕೋಟಿ ರೂ ಠೇವು ಸಂಗ್ರಹಿಸಿ, ಸದಸ್ಯರಿಗೆ 208.34 ಕೋಟಿ ರೂ ವಿವಿಧ ಸಾಲ ವಿತರಿಸಿದೆ. ಠೇವಣಿ ಭದ್ರತೆಗಾಗಿ ರಾಷ್ಟ್ರೀಕೃತ ಬ್ಯಾಂಕಗಳಲ್ಲಿ 81.34 ಕೋಟಿ ರೂ ಠೇವಣಿ ಮಾಡಲಾಗಿದು, ಮಾರ್ಚ ಅಂತ್ಯಕ್ಕೆ 321.67 ಕೋಟಿ ರೂ ದುಡಿಯುವ ಬಂಡವಾಳ ಹೊಂದಿ ಒಟ್ಟು 1544 ಕೋಟಿ ರೂ ವಾರ್ಷಿಕ ವಹಿವಾಟು ನಡೆದಿದೆ ಎಂದರು.

ಸೊಸೈಟಿಯು ಸದ್ಯ 18 ಶಾಖೆಗಳನ್ನು ಹೊಂದಿದು, ಶೀಘ್ರದಲ್ಲಿ ಬೆಳಗಾವಿ ಮತ್ತು ಕಟಕೋಳದಲ್ಲಿ ಶಾಖೆಯನ್ನು ಆರಂಭಿಸಲಾಘುವುದು, ಬೆಟಗೇರಿ ಶಾಖೆಯು ಸ್ವಂತ ಕಟ್ಟಡ ಹೊಂದಿದು, ವಡೇರಹಟ್ಟಿ ಮತ್ತು ಹುಣಶ್ಯಾಳ ಶಾಖೆಗಳ ಕಟ್ಟಡ ನಿರ್ಮಾಣ ಕಾರ್ಯ ಪ್ರಗತಿಯಲ್ಲಿವೆ. ಯರಗಟ್ಟಿ ಶಾಖೆಗೆ ಸ್ವಂತ ಕಟ್ಟಡ ನಿರ್ಮಿಸಲು ನಿವೇಶನ ಖರೀದಿಸಲಾಗಿದೆ ಎಂದರು. ಗ್ರಾಹಕರಿಗೆ ತ್ವರಿತಗತಿಯ ಸೇವೆ ಸಲ್ಲಿಸಲು ಸಂಸ್ಥೆಯು ಸಂಪೂರ್ಣ ಗಣಕೀಕೃತ ಸೇವೆಯನ್ನು ಅಳವಡಿಸಿಕೊಳ್ಳಲಾಗಿದೆ ಎಂದರು.

ಈ ಸಮಯದಲ್ಲಿ ಸೊಸೈಟಿಯ ಉಪಾಧ್ಯಕ್ಷ ರವೀಂದ್ರ ಭಾಗೋಜಿ, ನಿರ್ದೇಶಕರಾದ ಬಸವರಾಜ ತೇಲಿ, ಚನ್ನಬಸು ಬಡ್ಡಿ, ಶ್ರೀಕಾಂತ ಹಿರೇಮಠ, ಶ್ರೀಶೈಲ್ ಮದಗಣ್ಣವರ, ದೇವಪ್ಪ ಕೌಜಲಗಿ, ಕುಸಮಾ ತೇಲಿ, ಸುಮಿತ್ರಾ ಶೇಡಬಾಳ, ಮಹಾದೇವಿ ಹಿರೇಮಠ, ಲಕ್ಷ್ಮಣ ತೇಳಗಡೆ, ರಾಘವೇಂದ್ರ ಕೆಸಪನಟ್ಟಿ ಉಪಸ್ಥಿತರಿದ್ದರು



**ಬೆಳಗಾವಿ ವಾರ್ತೆ ಗೋಕಾಕ:** ನಗರದ ಹೊರವಲಯದಲ್ಲಿ ವೈದ್ಯ ಮಿತ್ರರ ಪ್ರಾಯೋಜಕತ್ವದಲ್ಲಿ ಆಯೋಜಿಸಿದ್ಧ ಇಂಟರ್ ಗೋಕಾಕ ಫುಟಬಾಲ್ ಪ್ರೀಮಿಯರ್ ಲೀಗ್ ಪಂದ್ಯಾವಳಿಯನ್ನು ಶನಿವಾರದಂದು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಡಾ.ಮಲ್ಲಿಕಾರ್ಜುನ ಬೀರನಗಡ್ಡಿ, ಡಾ.ಕೀರ್ತಿ ಬೀರನಗಡ್ಡಿ, ಡಾ.ಕಿರಣ ನಾವಲಗಟ್ಟಿ, ಡಾ.ಮಿಲಿಂದ ಜಾಧವ, ಡಾ.ಸಂದೀಪ ಶಿರಹಟ್ಟಿ, ಡಾ.ನವೀನ ಗೊಲಭಾಂವಿ, ಡಾ.ರಮೇಶ ಪಟಗುಂದಿ, ಡಾ.ಅರುಣ ವಣ್ಣೂರ, ಸಂಘಟಕರಾದ ಸೋಮನಾಥ ಮಗದುಮ, ಪ್ರವೀಣ ಗೌಡರ, ಆರ್ಯನ ಸಾಯನ್ನವರ, ವಿಶ್ವನಾಥ ರಾಮತೀರ್ಥ, ಸುಮೀತ ಜಾಧವ ಇದ್ದರು.



**ಬೆಳಗಾವಿ ವಾರ್ತೆ ಹುಬ್ಬಳ್ಳಿ :** ಅಂತರಾಷ್ಟ್ರೀಯ ರೋಟರಿ ಸಂಸ್ಥೆಯ ಸಂಸ್ಥಾಪಕ ಪೌಲ್ ಹಾರಿಸ್ ಅವರ ಜಯಂತಿ ನಿಮಿತ್ ಹೊನ್ನಪ್ಪ ತಾವರಗೇರಿ ರೋಟರಿ ಭವನದಲ್ಲಿರುವ ಶ್ರೇಷ್ಟ ಸಂಘಟಕ ಪೌಲ್ ಹಾರಿಸ್ ಅವರ ಪ್ರತಿಮೆಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಮಾಲಾರ್ಪಣೆ ಮಾಡುವ ಮೂಲಕ ಗೌರವ ಅರ್ಪಣೆ ಮಾಡಿ, ಭಕ್ತಿ ಪೂರ್ವಕ ನಮನಗಳನ್ನು ಸಲ್ಲಿಸಲಾಯಿತು. ಸೋಹನ ಸುರೇಶ ಹೊರಕೇರಿ, ಶಾಂಭವಿ ಸಾಲಿಮಠ, ರೋಟರಿ ಕ್ಲಬ್ ಹುಬ್ಬಳ್ಳಿ ಟ್ರಸ್ಟನ ಮಾಜಿ ಅಧ್ಯಕ್ಷ ಪ್ರೊ ಮಹಾಂತೇಶ ಸಜ್ಜನ, ರೋಟರಿ ಕ್ಲಬ್ ಹುಬ್ಬಳ್ಳಿ-ಉತ್ತರ ವಲಯದ ಅಧ್ಯಕ್ಷ ಗುರುಪಾದಯ್ಯ ಸಾಲಿಮಠ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಅಧ್ಯಕ್ಷ , ಸಾಹಿತಿ ಪ್ರೊ ಎಸ್ ಎಂ ಸಾತ್ಮಾರ್ , ಉಪಾಧ್ಯಕ್ಷ ಚನ್ನಬಸಪ್ಪ ಧಾರವಾಡಶೆಟ್ಟರ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ , ಮಂಜುನಾಥ್ ರಿತ್ತಿ ವಿನಯ್ ರಿತ್ತಿ, ಮುಂತಾದವರು ಇದ್ದರು.

## ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಕ್ಷೇತ್ರದಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದ್ದು ಇದರ ಸದುಪಯೋಗದಿಂದ ವಿದ್ಯಾರ್ಥಿಗಳು ಪ್ರತಿಭಾನ್ವಿತರಾಗಿ: ಶಾಸಕ ರಮೇಶ ಜಾರಕಿಹೊಳಿ

**ಬೆಳಗಾವಿ ವಾರ್ತೆ ಗೋಕಾಕ:** ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಕ್ಷೇತ್ರದಲ್ಲಿ ಮೂಲಬೂತ ಸೌಲಭ್ಯಗಳನ್ನು ಕಲ್ಪಿಸಲಾಗಿದ್ದು ಇದರ ಸದುಪಯೋಗದಿಂದ ವಿದ್ಯಾರ್ಥಿಗಳು ಪ್ರತಿಭಾನ್ವಿತರಾಗಿರೆಂದು ಶಾಸಕ ರಮೇಶ ಜಾರಕಿಹೊಳಿ ಹೇಳಿದರು.

ಅವರು, ರವಿವಾರದಂದು ನಗರದ ತಮ್ಮ ಕಾರ್ಯಾಲಯದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದವರು ಹಮ್ಮಿಕೊಂಡ ಗೋಕಾಕ ವಲಯದಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ 4ನೇ ರ್‍ಯಾಂಕ ಬಂದ ವಿದ್ಯಾರ್ಥಿಗಳು ಹಾಗೂ ವಲಯದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಮತ್ತು ಶೇ100ರಷ್ಟು ಫಲಿತಾಂಶ ಪಡೆದ ಶಾಲಾ ಮುಖ್ಯೋಪಾಧ್ಯಾಯರನ್ನು ಸತ್ಕರಿಸಿ ಮಾತನಾಡುತ್ತಿದ್ದರು.

ಶಿಕ್ಷಕರು ವಿದ್ಯಾರ್ಥಿಗಳಿಗೆ ಗುಣ ಮಟ್ಟದ ಶಿಕ್ಷಣ ನೀಡಿ ಅವರನ್ನು ಸಾಧಕರನ್ನಾಗಿ ಮಾಡಬೇಕು. ಪಾಲಕರು ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಿ ಸಹಕರಿಸಿ. ವಿದ್ಯಾರ್ಥಿಗಳ ಈ ಸಾಧನೆ ಪ್ರಶಂಶಿಸಿದ ಅವರು, ಇನ್ನು ಹೆಚ್ಚಿನ ಸಾಧನೆ ಮಾಡಿ ಅದಕ್ಕೆ ಪೂರಕವಾದ ಎಲ್ಲ ರೀತಿಯ ಸಹಾಯ ಸಹಕಾರ ನೀಡುವದಾಗಿ ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಜಿ ಬಿ ಬಳಗಾರ ಮಾತನಾಡಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು ವಲಯದಲ್ಲಿ 4069 ವಿದ್ಯಾರ್ಥಿಗಳು ಬರೆದಿದ್ದು ಅದರಲ್ಲಿ 3750ವಿದ್ಯಾರ್ಥಿಗಳು ಉತ್ತೀರ್ಣರಾಗಿ 92.18ಪ್ರತಿಶತ ಫಲಿತಾಂಶ ಬಂದಿದೆ. ಇದಕ್ಕೆ ಸಹಕಾರ ನೀಡಿದ ಎಲ್ಲರಿಗೂ ಅಭಿನಂಧನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ತಹಶೀಲದಾರ ಡಾ.ಮೋಹನ ಭಸ್ಮೆ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಪರಶುರಾಮ ಘಸ್ತೆ, ಶಾಸಕ ಆಪ್ತ ಸಹಾಯಕ ಭೀಮಗೌಡ ಪೋಲಿಸಗೌಡರ, ಕಾಂತು ಎತ್ತಿನಮನಿ, ಸುರೇಶ ಸನದಿ ಸೇರಿದಂತೆ ವಿವಿಧ ಶಾಲೆಗಳ ಶಿಕ್ಷಕರು, ಇಲಾಖೆಯ ಅಧಿಕಾರಿಗಳು ಇದ್ದರು.



ಗೋಕಾಕ: ಗೋಕಾಕ ವಲಯದಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ 4ನೇ ರ್‍ಯಾಂಕ ಬಂದ ವಿದ್ಯಾರ್ಥಿಗಳು & ವಲಯದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಮತ್ತು ಶೇ100ರಷ್ಟು ಫಲಿತಾಂಶ ಪಡೆದ ಶಾಲಾ ಮುಖ್ಯೋಪಾಧ್ಯಾಯರನ್ನು ಸತ್ಕರಿಸುತ್ತಿರುವದು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001